ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೩

## ಪಟ್ಟಿ – ೦೫

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ : ೦೪ನೇ ಫೆಬ್ರವರಿ, ೨೦೨೧

---

## ಸಮೂಹ – IV

೧. ಮುಖ್ಯಮಂತ್ರಿಗಳು
೨. ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು
೩. ಸಣ್ಣ ನೀರಾವರಿ ಸಚಿವರು
೪. ಜಲಸಂಪನ್ಮೂಲ ಸಚಿವರು
೫. ಅಬಕಾರಿ ಸಚಿವರು
೬. ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

---

## ಬೆಂಗಳೂರು ಮೆಟ್ರೋ ರೈಲ್ವೆ ನಿಗಮ ನಿಯಮಿತದಲ್ಲಿ ೩೭೧ಜೆ ಮೀಸಲಾತಿ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೭ (೩೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲ್ವೆಯಲ್ಲಿ ಇಲ್ಲಿಯವರೆಗೆ ೩೭೧ಜೆ ಮೀಸಲಾತಿ ನೀಡಲಾಗಿದೆಯೇ; ಹೌದಾದ್ದಲ್ಲಿ, ಅದರ ಸಂಪೂರ್ಣವಾದ ಮಾಹಿತಿ ಒದಗಿಸುವುದು;

(ಆ) ೩೭೧ಜೆ ಮೀಸಲಾತಿ ನೀಡದಿದ್ದರೆ ಅದಕ್ಕೆ ಕಾರಣಗಳೇನು? (ಮಾಹಿತಿ ಒದಗಿಸುವುದು)

## ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ೩೭೧ಜೆ ಮೀಸಲಾತಿ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨೮ (೩೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲ್ಯಾಣ ಕರ್ನಾಟಕದ ೩೭೧ಜೆ ತಿದ್ದುಪಡಿಯಿಂದ ಕಲ್ಯಾಣ ಕರ್ನಾಟಕ ವಿಭಾಗದವರಿಗೆ ನೇಮಕಾತಿ ಹಾಗೂ ಬಡ್ತಿಯಲ್ಲಿ ಮೀಸಲಾತಿ ಒದಗಿಸಿದ್ದು, ಆ ಭಾಗದ ಜನರಿಗೆ ಹಾಗೂ ಸರ್ಕಾರಿ ನೌಕರರಿಗೆ ರಾಜ್ಯದ ಇತರೆ (ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು) ವಿಭಾಗ ಹಾಗೂ ಜಿಲ್ಲಾ ಮಟ್ಟದಲ್ಲಿ ನೇಮಕಾತಿ ಹಾಗೂ ಪದೋನ್ನತಿಯಲ್ಲಿ ಮೀಸಲಿರಿಸಿದ ಹುದೆಗಳು ಎಷ್ಟು; (ಅಂಕಿ–ಅಂಶ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಭಾಗದ ಪ್ರಾದೇಶಿಕ ಹಾಗೂ ಜಿಲ್ಲಾ ಮಟ್ಟದಲ್ಲಿ ಈ ಭಾಗದ ಸಾರ್ವಜನಿಕರಿಗೆ ಹಾಗೂ ಸರ್ಕಾರಿ ನೌಕರರಿಗೆ ನೇಮಕಾತಿಯಲ್ಲಿ ಹಾಗೂ ಬಡ್ತಿಯಲ್ಲಿ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಿಪಡಿಸಲು ಸರ್ಕಾರ ಕ್ರಮ ವಹಿಸುವುದೇ;

(ಇ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸರ್ಕಾರಿ ನೌಕರರ ಪದೋನ್ನತಿಯಲ್ಲಿ ಇತರೆ ವೃಂದದಲ್ಲಿ ಈಗಾಗಲೇ ಪದೋನ್ನತಿ ಪಡೆದ ನೌಕರರ ಸಂಖ್ಯೆ ಎಷ್ಟು; ಹಾಗೂ ಪದೋನ್ನತಿ ವಂಚಿತ ಹಿರಿಯ ನೌಕರರ ಸಂಖ್ಯೆ ಎಷ್ಟು; (ಅಂಕಿ-ಅಂಶ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನೌಕರರಿಗೆ ಬಡ್ತಿ ನೀಡುವ ನಿಯಮಾವಳಿಯಲ್ಲಿ ಪ್ರತ್ಯೇಕ ಜೇಷ್ಠತಾ ಪಟ್ಟಿ ರಚಿಸಿ, ಈ ಭಾಗದ ಹಿರಿಯ ನೌಕರರನ್ನು ವಂಚಿಸಿ, ಇತರೆ ವೃಂದದ ಕಲ್ಯಾಣ ಕರ್ನಾಟಕ ಭಾಗದವರಲ್ಲದ ಕಿರಿಯ ವೃಂದದ ನೌಕರರಿಗೆ ಪದೋನ್ನತಿಗೆ ಪರಿಗಣಿಸುವ ನಿಯಮ ರೂಪಿಸಿರುವುದು ಯಾವ ಉದ್ದೇಶಕ್ಕೆ; (ಮಾಹಿತಿ ಒದಗಿಸುವುದು)

(ಉ) ಈ ನಿಯಮಕ್ಕೆ ತಿದ್ದುಪಡಿ ಮಾಡಿ ತಕ್ಷಣ ಈ ಭಾಗದ ಸಾರ್ವಜನಿಕರಿಗೆ ಹಾಗೂ ಸರ್ಕಾರಿ ನೌಕರರಿಗೆ ನ್ಯಾಯ ಒದಗಿಸಲಾಗುವುದೇ?

## ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಲ್ಲಿ ಬರುವ ೧೨೫ ಕೆರೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೨೯ (೪೩೮) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕೆರೆ ಸಂಜೀವಿನಿ ಯೋಜನೆಯಡಿಯಲ್ಲಿ ೧೩೯.೦೦ ಲಕ್ಷಗಳ ವೆಚ್ಚದಲ್ಲಿ ೩೪ ಕೆರೆಗಳಲ್ಲಿ ಹೂಳು ತೆಗೆಯದ ಕೆರೆಗಳು ಯಾವುವು; (ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಕೆರೆ ಸಂಜೀವಿನಿ ಯೋಜನೆಯಡಿಯಲ್ಲಿ ಎಷ್ಟು ಕೆರೆಗಳ ಹೂಳು ತೆಗೆಯಲಾಗಿದೆ? (ಮಾಹಿತಿ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಮಹಿಳಾ ತರಬೇತಿ ಶಾಲೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೩೦ (೪೩೯) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬ ರಲ್ಲಿ ಬೀದರ್ ಜಿಲ್ಲೆಯ ಮನ್ನಳಿ ಗ್ರಾಮ ಸರ್ವೆ ನಂ.೧೬೮ ರಲ್ಲಿ ೯ ಎಕರೆ ಜಮೀನು, ಮಹಿಳಾ ಪೊಲೀಸ್ ತರಬೇತಿ ಶಾಲೆಗಾಗಿ ಮಂಜೂರಾದ ಸ್ಥಳಕ್ಕೆ ತಂತಿ ಬೇಲಿ ಹಾಗೂ ತಡೆಗೋಡೆ ನಿರ್ಮಿಸಲು ಅನುಮತಿ ಕೋರಿ ಮನವಿ ಸಲ್ಲಿಸಿದ್ದು, ಇಲ್ಲಿಯವರೆಗೆ ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಮಂಜೂರಾತಿ ಯಾವಾಗ ನೀಡಲಾಗುವುದು; (ವಿವರ ನೀಡುವುದು)

(ಆ) ಈ ತರಬೇತಿ ಶಾಲೆಯಲ್ಲಿ ೮೦೦ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಉದ್ದೇಶಕ್ಕಾಗಿ ಶಾಲೆಯನ್ನು ತೆರೆಯಲು ಅನುಮತಿ ಕೋರಿ ೮.೧೨.೨೦೧೬ ರಂದು ಐ.ಜಿ.ಪಿ, ಬೆಂಗಳೂರು, ಇವರಿಗೆ ಅನುಮತಿ ಕೋರಿ ಅಂದಾಜು ವೆಚ್ಚದೊಂದಿಗೆ ಮನವಿ ಸಲ್ಲಿಸಲಾಗಿತ್ತು ; ಅದು ಯಾವ ಹಂತದಲ್ಲಿದೆ; ಇದಕ್ಕೆ ಅನುಮತಿ ನೀಡುವುದು ಯಾವಾಗ; (ವಿವರ ಒದಗಿಸುವುದು)

(ಇ) ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ?

## ಕರ್ನಾಟಕದಲ್ಲಿ ಕಾರ್ಖಾನೆಗಳು ಸ್ಥಾಪನೆ ಮಾಡಲು ಪ್ರೋತ್ಸಾಹ ನೀಡುವ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು):–**

೩೩೧ (೪೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಆಂಧ್ರ ಪ್ರದೇಶದಲ್ಲಿ ಫೇರೊ ಅಲ್ಲೈಸ್ & ಇತರೆ ಕೈಗಾರಿಕೆ ಕಾರ್ಖಾನೆಗಳಿಗೆ ಇಂಧನ ದರದಲ್ಲಿ ಸಹಾಯಧನ (ಪವರ್) ಕೊಡುತ್ತಿದ್ದು, ಅದೇ ರೀತಿ ಕರ್ನಾಟಕದಲ್ಲಿ ಕೊಡುವ ಚಿಂತನೆ ಇದೆಯಾ; ಈ ನೀತಿ ಅಳವಡಿಸಿದರೆ ಬಹುತೇಕ ಕಾರ್ಖಾನೆಗಳು ಕರ್ನಾಟಕದಲ್ಲಿ ಸ್ಥಾಪನೆ ಮಾಡಲು ಅನುಕೂಲವಾಗುವುದರಿಂದ ಈ ಬಗ್ಗೆ ಸರ್ಕಾರದ ಕಾರ್ಯಕ್ರಮವೇನು?

## ಬೆಂಗಳೂರಿನಲ್ಲಿ ಹೆಚ್ಚುವರಿ ಮಳೆ ನೀರನ್ನು ಕ್ರೂಢೀಕರಿಸಲು ಯೋಜನೆಯ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು):–**

೩೩೨ (೪೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೆಂಗಳೂರಿನಲ್ಲಿ ಸತತವಾಗಿ ಕಳೆದ ಮೇ ತಿಂಗಳಿಂದ ಜನವರಿ–೨೦೨೧ ರವರೆಗೂ ಸತತವಾಗಿ ಮಳೆ ಬಿದ್ದಿದ್ದು, ಹೆಚ್ಚುವರಿ ಮಳೆ ನೀರನ್ನು ಕ್ರೂಡೀಕರಿಸಲು ಯಾವುದಾದರೂ ವಿನೂತನವಾದ ಯೋಜನೆ ಸರ್ಕಾರ ಹಮ್ಮಿಕೊಂಡಿದೆಯೇ; ಹಾಗಿದ್ದಲ್ಲಿ, ಇದರ ಬಗ್ಗೆ ಪೂರ್ಣ ಮಾಹಿತಿ ತಿಳಿಸುವುದು?

## ತುಂಗಭದ್ರ ಜಲಾಶಯಕ್ಕೆ ಮಳೆಗಾಲದಲ್ಲಿ ಹೆಚ್ಚುವರಿ ನೀರು ಹರಿದು ಸಂಗ್ರಹಿಸಲು ಗಂಗಾವತಿ ಹತ್ತಿರ ಇರುವ ನವಲಿ ಗ್ರಾಮದ ಹತ್ತಿರ ಸಮಾನಾಂತರ ಜಲಾಶಯ ನಿರ್ಮಾಣದ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು):–**

೩೩೩ (೪೧೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ತುಂಗಭದ್ರ ಜಲಾಶಯಕ್ಕೆ ಮಳೆಗಾಲದಲ್ಲಿ ಹೆಚ್ಚುವರಿ ನೀರು ಹರಿದು ಬರುವುದರಿಂದ ಹೆಚ್ಚುವರಿ ನೀರನ್ನು ಸಂಗ್ರಹಿಸಲು ಗಂಗಾವತಿ ಹತ್ತಿರ ಇರುವ ನವಲಿ ಗ್ರಾಮದ ಹತ್ತಿರ ಸಮಾನಾಂತರ ಜಲಾಶಯ ನಿರ್ಮಿಸಲು ಕ್ರಮಕೈಗೊಳ್ಳಲಾಗಿದೆಯೇ; ಇದಕ್ಕಾಗಿ ಮುಂದಿನ ಆಯುವ್ಯಯದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲು ಯೋಜಿಸಲಾಗಿದೆ? (ಪೂರ್ಣ ಮಾಹಿತಿ ತಿಳಿಸುವುದು)

## ರೋಷ್ಟರ್ ನಿಯಮಾವಳಿಗಳ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೩೩೪ (೪೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾಷಾ ಅಲ್ಪಸಂಖ್ಯಾತ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇರುವ ರೋಷ್ಟರ್ ನಿಯಮಾವಳಿಗಳೇನು; ಹಾಗೂ ರೋಷ್ಟರ್ ಅನ್ವಯವಾಗುತ್ತಿದೆಯೇ;

(ಆ) ಈ ರೋಷ್ಟರ್ ವಿನಾಯಿತಿ ನೀಡುವ ಸಂಬಂಧ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ಸರ್ಕಾರಕ್ಕೆ ಸಲಹೆ ಕೇಳಿದೆಯೇ;

ಕೇಳಿದ್ದರೆ, ಸರ್ಕಾರದ ನಿಲುವೇನು; ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಮಾನದಂಡಗಳೇನು? (ಪ್ರಸ್ತಾವನೆಯ ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩೫ (೪೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕೆರೆಗಳಾವುವು; ಸರ್ವೆ ನಂ., ಅವುಗಳ ವಿಸ್ತೀರ್ಣ, ಕ್ಯಾಚ್‌ಮೆಂಟ್ ಪ್ರದೇಶ ಮುಂತಾದ ವಿವರಗಳನ್ನು ಸರ್ವೆ ನಂಬರ್, ವಾರ್ಡ್‌ವಾರು, ಮತಕ್ಷೇತ್ರವಾರು ವಿವರ ನೀಡುವುದು;

(ಆ) ಪಾಲಿಕೆಯ ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕೆರೆಗಳು ಎಷ್ಟು ಒತ್ತುವರಿಯಾಗಿವೆ; ಒತ್ತುವರಿ ಮಾಡಿರುವವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು; ಯಾರು, ಯಾವ ಸರ್ವೆ ನಂಬರುಗಳಲ್ಲಿ ಎಷ್ಟು ಕ್ಷೇತ್ರವನ್ನು ಒತ್ತುವರಿ ಮಾಡಲಾಗಿದೆ; (ಸಂಪೂರ್ಣ ವಿವರಗಳನ್ನು ವಾರ್ಡ್‌ವಾರು, ಮತಕ್ಷೇತ್ರವಾರು ನೀಡುವುದು)

(ಇ) ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ ನಿಗದಿತ ವಿಸ್ತೀರ್ಣದಂತೆ ತಡೆಗೋಡೆಗಳನ್ನು ಹಾಕಿ ಸಂರಕ್ಷಣೆ ಮಾಡಿ ಅಭಿವೃದ್ಧಿಪಡಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಸರ್ಕಾರದಿಂದ ಯಾವಾಗ ಕ್ರಮ ಕೈಗೊಳ್ಳಲಾಗುವುದು;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ವಿವಿಧ ಮೂಲಗಳಿಂದ ಸಂಗ್ರಹವಾಗಬೇಕಾದ/ಸಂಗ್ರಹವಾಗುವ ಪ್ರತಿ ತಿಂಗಳ ಆದಾಯವೆಷ್ಟು? (ಪ್ರತ್ಯೇಕವಾಗಿ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ ಹುದ್ದೆಗಳ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩೬ (೪೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಎಷ್ಟು ಹುದ್ದೆಗಳು ಖಾಲಿ ಇವೆ; (ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಿವಿಧ ಇಲಾಖೆ/ನಿಗಮ/ಮಂಡಳಿಗಳ ನೌಕರರ ಸೇವೆಯನ್ನು ವಿಲೀನಗೊಳಿಸಲಾಗಿದೆಯೇ; (ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ವಿಲೀನ ಪ್ರಕ್ರಿಯೆಯಲ್ಲಿ ಅನುಸರಿಸುವ ಮಾನದಂಡಗಳೇನು; (ಪೂರ್ಣ ವಿವರ ನೀಡುವುದು)

(ಈ) ವಿವಿಧ ಇಲಾಖೆ/ನಿಗಮ/ಮಂಡಳಿಗಳ ಎಷ್ಟು ಜನ ನೌಕರರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜಿಸಲಾಗಿದೆ; (ಹುದ್ದೆವಾರು/ಇಲಾಖೆವಾರು ವಿವರ ನೀಡುವುದು) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಒಡೆತನದಲ್ಲಿರುವ ವಾಣಿಜ್ಯ ಮಳಿಗೆಗಳ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩೭ (೪೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಒಡೆತನದಲ್ಲಿರುವ ವಾಣಿಜ್ಯ ಮಳಿಗೆ / ಅಂಗಡಿ ಮುಂಗಟ್ಟುಗಳ ಸಂಖ್ಯೆ ಎಷ್ಟು ; ಪ್ರತಿ ಮಳಿಗೆ / ಅಂಗಡಿಯ ಅಳತೆ ಎಷ್ಟು ; ಅವು ಇರುವ ಪ್ರದೇಶ ಯಾವುವು ; ಯಾರಿಗೆ ಯಾವ ಅವಧಿಗೆ ಲೀಸ್ ನೀಡಲಾಗಿದೆ ; ಲೀಸ್ ಮುಗಿದಿದ್ದಲ್ಲಿ, ಲೀಸ್ ಅವಧಿಯನ್ನು ಮುಂದುವರೆಸಲಾಗಿದೆಯೇ ; ಇಲ್ಲವಾದಲ್ಲಿ, ಅವರನ್ನು ತೆರವುಗೊಳಿಸಲು ಪಾಲಿಕೆ ಕೈಗೊಂಡಿರುವ ಕ್ರಮಗಳೇನು ; (ಪ್ರತಿ ಮಳಿಗೆ / ಅಂಗಡಿವಾರು ಪೂರ್ತಿ ಮಾಹಿತಿ ನೀಡುವುದು)

(ಆ) ಯಾವ ಆಧಾರದ ಮೇಲೆ ಲೀಸ್ ನೀಡಲಾಗಿದೆ ಹಾಗೂ ದರವನ್ನು ನಿಗಧಿಪಡಿಸುವಾಗ ಅನುಸರಿಸಿದ ಮಾನದಂಡಗಳೇನು ; ಲೀಸ್ ಅವಧಿ ಮುಗಿದಿರುವ ಮಳಿಗೆ / ಅಂಗಡಿಗಳು ಯಾವುವು ? (ವಿಳಾಸ ಹಾಗೂ ಪೂರ್ತಿ ವಿವರ ನೀಡುವುದು)

## ಕಸವನ್ನು ವಿಲೇವಾರಿ ಮಾಡುವ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩೮ (೪೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡಲು ಯಾವಾಗ ಗುತ್ತಿಗೆಯನ್ನು ನೀಡಲಾಗಿದೆ ; ಗುತ್ತಿಗೆಯ ಅವಧಿಯು ಮುಗಿದಿದೆಯೇ ; ಅದೇ ಗುತ್ತಿಗೆದಾರರನ್ನು ಮುಂದುವರೆಸಲು ನಿಯಮಗಳಲ್ಲಿ ಅವಕಾಶವಿದೆಯೇ ; ಇಲ್ಲವಾದಲ್ಲಿ, ನಿಯಮ ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಕಸ ಸಂಗ್ರಹಣಾ ಕೇಂದ್ರಕ್ಕೆ ದಿನಾಂಕ: ೦೧.೦೧.೨೦೧೮ ರಿಂದ ೩೧.೧೨.೨೦೨೦ರವರೆಗೆ ಪ್ರತಿ ದಿನ ಯಾವ ವಾಹನದಲ್ಲಿ ಎಷ್ಟು ಟನ್ ಕಸ ಸಂಗ್ರಹಿಸಲಾಗುತ್ತಿದೆ ; ತೂಕವನ್ನು ಪರಿಶೀಲಿಸಲಾಗಿದೆಯೇ ; (ದಿನಾಂಕ, ಪ್ರತಿ ವಾಹನದ ತೂಕದ ರಸೀದಿ ವಿವರ, ವಾಹನದ ಮಾದರಿ, ವಾಹನಗಳ ಸಂಖ್ಯೆ, ತೂಕ ಪರಿಶೀಲಿಸಿದ ಸಿಬ್ಬಂದಿಯ ಹೆಸರು, ದಿನಾಂಕವಾರು ಸಂಪೂರ್ಣ ವಿವರ ನೀಡುವುದು)

(ಇ) ಕಸ ಸಂಗ್ರಹಣಾ ಕೇಂದ್ರದಲ್ಲಿರುವ ವೇ-ಬ್ರಿಡ್ಜ್‌ನ ನಿರ್ವಹಣೆಯನ್ನು ಪಾಲಿಕೆ ನಿರ್ವಹಿಸುವುದೇ ಅಥವಾ ಗುತ್ತಿಗೆದಾರರು ನಿರ್ವಹಿಸುತ್ತಾರೆಯೇ ; ಇದು ಪ್ರತಿ ವರ್ಷ ತೂಕ ಮತ್ತು ಅಳತೆ ಇಲಾಖೆಯ ತಪಾಸಣೆಗೆ ಒಳಪಟ್ಟಿದೆಯೇ ; (ವಿವರಗಳನ್ನು ಒದಗಿಸುವುದು)

(ಈ) ಕಸ ಸಂಗ್ರಹಣೆ ಹಾಗೂ ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳಾವುವು ?

## ಆರ್ಥಿಕ ಇಲಾಖೆಯ ಮಿತವ್ಯಯ ಆದೇಶ ಹಿಂಪಡೆಯುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೩೩೯ (೪೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ವಿವಿಧ ಇಲಾಖೆಗಳಡಿಯಲ್ಲಿ ವೇತನಾನುದಾಕ್ಕೆ ಒಳಪಡಿಸಲು ಮತ್ತು ಖಾಲಿ ಹುದ್ದೆಗಳನ್ನು ತುಂಬಲು ಸಾಕಷ್ಟು ಪ್ರಸ್ತಾವನೆಗಳು ಸ್ವೀಕೃತವಾಗಿರುವುದು ನಿಜವೇ;

(ಆ) ಒಂದೊಂದು ಪ್ರಸ್ತಾವನೆಯೂ ಒಂದೊಂದು ಕುಟುಂಬದ ಜೀವನವನ್ನು ಒಳಗೊಂಡಿದ್ದು, ಇಂತಹ ಪ್ರಸ್ತಾವನೆಗಳನ್ನು ಅನುದಾನಕ್ಕೆ ಒಳಪಡಿಸುವ ಸಂದರ್ಭದಲ್ಲಿ ಸರ್ಕಾರವು ಸಂಖ್ಯೆ: ಆಇ/೧೫೭/ವೆಚ್ಚ–೮/೨೦೨೦, ದಿನಾಂಕ:೧೦.೦೬.೨೦೨೦ ರಂತೆ ಆರ್ಥಿಕ ಇಲಾಖೆಯಿಂದ ಸುತ್ತೋಲೆಯನ್ನು ಹೊರಡಿಸಿ ಈ ಪ್ರಸ್ತಾವನೆಗಳನ್ನು ವಿಲೆ ಇಟ್ಟಿರುವುದು ನಿಜವೇ;

ಇ) ಈ ಆರ್ಥಿಕ ಇಲಾಖೆಯ ಸುತ್ತೋಲೆಯಿಂದ ಸಾವಿರಾರು ಕುಟುಂಬಗಳು ಬೀದಿಗೆ ಬೀಳುವ ಪರಿಸ್ಥಿತಿಗೆ ಬಂದಿದ್ದು, ಸರ್ಕಾರವು ಯಾವ ಕಾಲಮಿತಿಯೊಳಗೆ ಆರ್ಥಿಕ ಇಲಾಖೆಯ ''ಆರ್ಥಿಕ ಮಿತವ್ಯಯ'' ಸುತ್ತೋಲೆಯನ್ನು ಹಿಂಪಡೆಯಲಾಗುವುದು?

## FDA/SDA ಗಳ ನೇಮಕಾತಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೩೪೦ (೪೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭ ರಲ್ಲಿ ಅಧಿಸೂಚನೆ ಹೊರಡಿಸಿ ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾದ FDA ಮತ್ತು SDA ಅಭ್ಯರ್ಥಿಗಳೆಷ್ಟು; (ವಿವರ ನೀಡುವುದು)

(ಆ) ಯಾವಾಗ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ;

(ಇ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಮುಂದಿನ ಆರ್ಥಿಕ ವರ್ಷದವರೆಗೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ತಡೆಯನ್ನು ತೆರವುಗೊಳಿಸಿ ನೇಮಕಾತಿ ಆದೇಶವನ್ನು ಯಾವಾಗ ನೀಡಲಾಗುವುದು ?

## ನದಿಯ ತೀರದ ಪ್ರದೇಶದಲ್ಲಿ ಸಾಕಷ್ಟು ಪ್ರಮಾಣದ ಹಾನಿಯಾಗುತ್ತಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೧ (೪೧೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಪ್ರತಿವರ್ಷ ಮಳೆಗಾಲದಲ್ಲಿ ನದಿಗಳು ಉಕ್ಕಿ ಹರಿಯುವುದರಿಂದ ನದಿಯ ತೀರ ಪ್ರದೇಶಗಳು ಸಾಕಷ್ಟು ಪ್ರಮಾಣದಲ್ಲಿ ಬೆಳೆ,ಮನೆ,ಜಮೀನುಗಳಿಗೆ ಹಾನಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮಳೆಗಾಲದಲ್ಲಿ ಪ್ರವಾಹವನ್ನು ಶಾಶ್ವತವಾಗಿ ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು?(ವಿವರ ಒದಗಿಸುವುದು)

## ನೂತನ ಪಿಂಚಣಿ ಕುರಿತು (ಗೆಜೆಟೆಡ್ ಆಫೀಸರ್ಸ್)

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ):–**

೩೪೨ (೪೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೮ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳಿಗೆ ಆಯ್ಕೆಯಾದವರಿಗೆ ೨೦೦೬ ಏಪ್ರಿಲ್‌ನಲ್ಲಿ ಹಾಗೂ ನಂತರದಲ್ಲಿ ಸೇರ್ಪಡೆ ಆದೇಶ ಪಡೆದವರನ್ನು ನೂತನ ಪಿಂಚಣಿ ಯೋಜನೆಗೆ ಸೇರ್ಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೇಂದ್ರ ಸರ್ಕಾರ ಈ ರೀತಿಯ ಪ್ರಕರಣಗಳಿಗೆ ವಿನಾಯಿತಿ ನೀಡಿ, ಹಳೆ ಪಿಂಚಣಿ ವ್ಯವಸ್ಥೆಗೆ ಅರ್ಹತೆ ನೀಡಿರುವ ಬಗ್ಗೆ Official Memorandum ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮಗಳೇನು ;

(ಇ) ಇಲ್ಲದಿದ್ದಲ್ಲಿ, ಈ ಕುರಿತು ಸದರಿ ಅಧಿಕಾರಿಗಳು ನೀಡಿರುವ ಮನವಿಗಳ ಬಗ್ಗೆ ಸರ್ಕಾರ ಎಷ್ಟು ದಿನಗಳಲ್ಲಿ ಹಳೆಯ ಪಿಂಚಣಿ ಯೋಜನೆಗೆ ಅರ್ಹತೆಯನ್ನು ಪರಿಗಣಿಸುವ ಬಗ್ಗೆ ಆದೇಶ ನೀಡುತ್ತದೆ ?

## ಪೊಲೀಸ್ ದೂರು ಪ್ರಾಧಿಕಾರ ರಚನೆ ಕುರಿತು

**ಡಾ॥ ಚಂದ್ರಶೇಖರ್ ಬಿ.ಪಾಟೀಲ್(ಪದವೀಧರರ ಕ್ಷೇತ್ರ):–**

೩೪೩ (೪೭೯) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಪೊಲೀಸ್ ದೂರು ಪ್ರಾಧಿಕಾರ ರಚನೆ ಮಾಡಲಾಗಿದೆ; ಇಲ್ಲಿಯವರೆಗೆ ಈ ದೂರು ಪ್ರಾಧಿಕಾರಕ್ಕೆ ಬಂದ ದೂರುಗಳು ಎಷ್ಟು; ಮತ್ತು ಎಷ್ಟು ದೂರುಗಳಿಗೆ ಪರಿಹಾರ ಕಲ್ಪಿಸಲಾಗಿದೆ;

(ಆ) ಪೊಲೀಸ್ ದೂರು ಪ್ರಾಧಿಕಾರ ರಚನೆಯಾದರೂ ಸಹ ಸದಸ್ಯರ ಹುದ್ದೆಗಳನ್ನು ಸರಕಾರ ಭರ್ತಿ ಮಾಡಿರುವುದಿಲ್ಲವೆ ; ಹಾಗಿದ್ದಲ್ಲಿ, ಎಷ್ಟು ಸದಸ್ಯ ಹುದ್ದೆಗಳು ಖಾಲಿ ಇವೆ?

## ಜೆಸ್ಕಾಂ ಪೋಲಿಸ್ ವಸತಿ ಗೃಹಗಳ ವಿದ್ಯುತ್ ಬಗ್ಗೆ

**ಡಾ॥ ಚಂದ್ರಶೇಖರ್ ಬಿ.ಪಾಟೀಲ್(ಪದವೀಧರರ ಕ್ಷೇತ್ರ):–**

೩೪೪ (೪೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜೆಸ್ಕಾಂಗೆ ಪೊಲೀಸ್ ವಸತಿ ಗೃಹಗಳಿಂದ ಬರಬೇಕಾದ ವಿದ್ಯುತ್ ಬಿಲ್ ಬಾಕಿ ಮೊತ್ತ ಎಷ್ಟು;

(ಆ) ವಿದ್ಯುತ್ ಬಿಲ್ ಬಾಕಿ ವಸೂಲಿಗೆ ಜೆಸ್ಕಾಂ ಯಾವ ಕ್ರಮ ಕೈಗೊಂಡಿದೆ ?

## ಸಣ್ಣ ರಸ್ತೆಗಳಿಗೆ (ಕನ್ಸರ್ವೆನ್ಸ್) ಗೇಟ್ ಅಳವಡಿಸಿರುವುದರ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪೫ (೪೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮುಖ್ಯ ರಸ್ತೆಗಳ ಹಿಂಭಾಗದಲ್ಲಿ ಸಣ್ಣ ಸಣ್ಣ ರಸ್ತೆಗಳಿದ್ದು (ಹಿಂದೆ ಕನ್ಸರ್ವೆನ್ಸ್ ರಸ್ತೆ ಎಂದು ಕರೆಯಲಾಗುತ್ತಿತ್ತು) ಅವುಗಳಿಗೆ ಕಬ್ಬಿಣದ ಗೇಟುಗಳನ್ನು ಯಾವ ಕಾರಣಕ್ಕೆ ಹಾಗೂ ಯಾರು ಹಾಕಿಸಿದ್ದಾರೆ;

(ಆ) ಈ ಸಣ್ಣ ರಸ್ತೆಗಳಲ್ಲಿ ಅನೇಕ ಮನೆಗಳಿದ್ದು ಅಲ್ಲಿನ ನಿವಾಸಿಗಳು ಓಡಾಡಲು ಅವಕಾಶವಿದ್ದು ರಾತ್ರಿ ವೇಳೆ ಗೇಟುಗಳನ್ನು ಮುಚ್ಚುವುದರಿಂದ ಅಲ್ಲಿನ ನಿವಾಸಿಗಳಿಗೆ ತೊಂದರೆಯಾಗುದಿಲ್ಲವೇ; ಈ ನಿರ್ಧಾರವನ್ನು ತೆಗೆದುಕೊಳ್ಳುವವರು ಯಾರು ;

(ಇ) ಮುಖ್ಯ ರಸ್ತೆಯಲ್ಲಿ ವಾಸ ಮಾಡುವ ಮನೆ ಮಾಲೀಕರು ತಮ್ಮ ವಾಹನಗಳನ್ನು ನಿಲ್ಲಿಸಿಕೊಂಡು ಗೇಟಿಗೆ ಬೀಗ ಹಾಕಿಕೊಂಡು ತಮ್ಮ ಸ್ವಂತ ಆಸ್ತಿಯಂತೆ ಉಪಯೋಗಿಸುತ್ತಿದ್ದು, ಇದನ್ನು ತಪ್ಪಿಸಿ ಸಾರ್ವಜನಿಕ ರಸ್ತೆಯನ್ನು ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲು ತೆಗೆದುಕೊಂಡ ಕ್ರಮಗಳೇನು ?

## ಬಿ.ಬಿ.ಎಂ.ಪಿ ವ್ಯಾಪ್ತಿಯ ಖಾಲಿ ನಿವೇಶಗಳಲ್ಲಿ ಮಲೀನ ವಾತಾವರಣ ನಿರ್ಮಾಣ ತಪ್ಪಿಸುವ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪೬ (೪೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ.ಬಿ.ಎಂ.ಪಿ ವ್ಯಾಪ್ತಿಯ ಜನವಸತಿ ಪ್ರದೇಶಗಳಲ್ಲಿ ಕೆಲವು ಮಾಲೀಕರು ಖಾಲಿ ನಿವೇಶಗಳನ್ನು ಇಟ್ಟುಕೊಂಡಿದ್ದು, ಅಲ್ಲಿ ಜನರು ಕಸಕಡ್ಡಿಗಳನ್ನು ಹಾಕಿ ಮಲೀನ ವಾತಾವರಣ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ;

(ಆ) ಖಾಲಿ ನಿವೇಶದಲ್ಲಿ ಸಂಗ್ರಹವಾಗಿರುವ ಕಸಕಡ್ಡಿಗಳು ಮಳೆ ಬಂದಾಗ ನೆನೆದು ಕೊಳೆತು ಅಕ್ಕಪಕ್ಕ ವಾಸ ಮಾಡುತ್ತಿರುವ ಮನೆಗಳ ನಿವಾಸಿಗಳಿಗೆ ದುರ್ವಾಸನೆ ಬರುತ್ತಿರುವುದಲ್ಲದೆ ಖಾಯಿಲೆಗಳಿಗೆ ತುತ್ತಾಗುವ ಅವಕಾಶ ಇರುವುದರಿಂದ ಇದನ್ನು ಸ್ವಚ್ಛಗೊಳಿಸುವಂತೆ ಮಾಲೀಕರಿಗೆ ನೋಟೀಸ್ ನೀಡಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಕರೋನಾ ಮುಂತಾದ ಕಾಯಿಲೆ ಹರಡುತ್ತಿರುವುದರಿಂದ ಇಂಥ ಮಲೀನ ವಾತಾವರಣ ತಪ್ಪಿಸಿ ಸ್ವಚ್ಛ ವಾತಾವರಣ ಉಂಟು ಮಾಡಲು ಬಿ.ಬಿ.ಎಂ.ಪಿಯ ಆರೋಗ್ಯ ಇಲಾಖೆ ಕೂಡಲೇ ಕ್ರಮ ಕೈಗೊಳ್ಳುವುದೇ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಡೆಸುವ ಶಾಲಾ ಕಾಲೇಜುಗಳ ಉಪನ್ಯಾಸಕರ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೩೪೭ (೪೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಡೆಸುವ ಪ್ರೌಢಶಾಲೆಗಳಿಗೆ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜು ಮತ್ತು ಪದವಿ ಕಾಲೇಜುಗಳಿಗೆ ಉಪನ್ಯಾಸಕರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ಎಷ್ಟು ಶಿಕ್ಷಕರು ಮತ್ತು ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ;

(ಇ) ಸದರಿಯವರುಗಳಿಗೆ ಕಳೆದ ಮೂರು ತಿಂಗಳಿಂದ ವೇತನ ನೀಡದೆ ಇರಲು ಕಾರಣಗಳೇನು ?

## ಬೆಂಗಳೂರಿನಲ್ಲಿರುವ ಹಳೆಯ ಕಟ್ಟಡಗಳ ಕುರಿತು

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೩೪೮ (೪೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಮಲ್ಲೇಶ್ವರಂನ ಸಂಪಿಗೆ ಥಿಯೇಟರ್ ಹತ್ತಿರ ಹಳೇ ಕಾಲದ ಕಟ್ಟಡದಲ್ಲಿ ಹಲವರು ಜೀವನ ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬೆಂಗಳೂರಿನ ವಿವಿಧ ಕಡೆ ಅಂತಹ ಕಟ್ಟಡಗಳನ್ನು ಗುರುತಿಸಿ, ಕಟ್ಟಡಗಳನ್ನು ಆಧುನೀಕರಣಗೊಳಿಸಿ ಅಲ್ಲಿಯ ಜನರಿಗೆ ಶುದ್ಧ ವಾತಾವರಣವನ್ನು ಕಲ್ಪಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಈ ತರಹದ ವಾತಾವರಣವನ್ನು ಸೃಷ್ಠಿಸುವುದರಿಂದ ಸರ್ಕಾರದ ಸ್ಮಾರ್ಟ್ ಸಿಟಿ ಯೋಜನೆಯನ್ನು ಜಾರಿಗೆ ತಂದಂತಾಗುವುದಿಲ್ಲವೇ;

(ಈ) ಇಂತಹ ಕಾರ್ಯಕ್ರಮಗಳನ್ನು ಸರ್ಕಾರ ಯಾವಾಗಿನಿಂದ ಜಾರಿಗೆ ತರಲು ಕ್ರಮವಹಿಸುವುದು ?

## ಕೋವಿಡ್ ಪರಿಣಾಮ ಪ್ರಾಧ್ಯಾಪಕರ ನೇಮಕಾತಿ ತಡೆಹಿಡಿದಿರುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೩೪೯ (೪೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಮತ್ತು ಶಿಕ್ಷಣ ಇಲಾಖೆಗಳ ಆದೇಶದಂತೆ ದಿನಾಂಕ:೩೦.೧೨.೨೦೧೫ರೊಳಗೆ ಮರಣ/ನಿವೃತ್ತಿ/ವರ್ಗಾವಣೆ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ;

(ಆ) ೨೦೨೦-೨೧ನೇ ಸಾಲಿನಲ್ಲಿ ಆರ್ಥಿಕ ಇಲಾಖೆಯು ಕೋವಿಡ್-೧೯ರ ಪರಿಣಾಮ ಸುತ್ತೋಲೆ ಹೊರಡಿಸಿ ವಿವಿಧ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿಯನ್ನು ತಡೆ ಹಿಡಿದಿರುವುದು ಸರಿಯೇ;

(ಇ) ಆರ್ಥಿಕ ಇಲಾಖೆಯು ಹೊರಡಿಸಿರುವ ಸುತ್ತೋಲೆಯಿಂದ ಹಲವಾರು ವರ್ಷಗಳಿಂದ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವವರ ವಯೋಮಿತಿ ಮೀರುತ್ತಿದ್ದು, ಆರ್ಥಿಕ ಇಲಾಖೆಯು ಹೊರಡಿಸಿರುವ ಸುತ್ತೋಲೆಯನ್ನು ಸರ್ಕಾರವು ಹಿಂಪಡೆಯಲು ಸೂಕ್ತ ಕ್ರಮ ವಹಿಸುವುದೇ ?

## ಬೆಂಗಳೂರು ಶಿವಾನಂದ ಸರ್ಕಲ್‌ನಲ್ಲಿನ ಮೇಲ್ಸೇತುವೆಯ ನಿರ್ಮಾಣ ಪ್ರಗತಿಯ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೫೦ (೩೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಶಿವಾನಂದ ಸರ್ಕಲ್‌ನಲ್ಲಿ ನಿರ್ಮಿಸುತ್ತಿರುವ ಮೇಲ್ಸೇತುವೆಯ ಯೋಜನೆಯನ್ನು ಯಾವಾಗ ರೂಪಿಸಲಾಯಿತು;

(ಆ) ಈ ಯೋಜನೆಯ ಮೂಲ ಅಂದಾಜು ಎಷ್ಟು; ಹಾಗೂ ಈಗಿನ ಅಂದಾಜು ಎಷ್ಟು;

(ಇ) ಯೋಜನಾ ವೆಚ್ಚ ಏರಿಕೆಗೆ ಕಾರಣಗಳೇನು; (ವಿವರಗಳನ್ನು ನೀಡುವುದು)

(ಈ) ಈ ಯೋಜನೆಯನ್ನು ಕಾರ್ಯಗತ ಮಾಡುವಾಗ ಎಷ್ಟು ಮರಗಳನ್ನು ಕಡಿಯಲಾಗಿದೆ; ಹಾಗೂ ಬದಲಿಗೆ ಎಷ್ಟು ಮರಗಳನ್ನು ಬೆಳೆಸಲು ಉದ್ದೇಶಿಸಲಾಗಿದೆ; (ವಿವರಗಳನ್ನು ನೀಡುವುದು)

(ಉ) ಈ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬೆಳಕಿಗೆ ಬಂದಿರುವ ವಿವಿಧ ಹಗರಣಗಳ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೧ (೩೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬೆಳಕಿಗೆ ಬಂದಿರುವ ವಿವಿಧ ಹಗರಣಗಳ ಬಗ್ಗೆ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತಾದ ಹಗರಣ, ಕಾರಣಕರ್ತರು, ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮಗಳೇನು; (ಹಗರಣವಾರು ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬೆಂಗಳೂರು ನಗರದ ಸಮಗ್ರ ಅಭಿವೃದ್ಧಿ ಮತ್ತು ಬೆಂಗಳೂರು ನಾಗರೀಕರ ವಸತಿ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸದಾಕಾಲ ಹಗರಣಗಳಲ್ಲಿ ಭಾಗಿಯಾಗುತ್ತಿರುವ ಗಂಭೀರ ವಿಷಯವನ್ನು ಸರ್ಕಾರ ಯಾವ ರೀತಿಯಲ್ಲಿ ನಿಭಾಯಿಸಲು ಆಲೋಚಿಸಿದೆ; ಕಾಯಕಲ್ಪದ ದೃಷ್ಟಿಯಲ್ಲಿ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

# ಬಿ.ಡಿ.ಎ. ಜಮೀನು ಮರು ಮಂಜೂರಾತಿಯಲ್ಲಿ ಅಕ್ರಮ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೨ (೩೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ವಿವಿಧ ಕಾರಣಗಳಿಗಾಗಿ ಮಂಜೂರಾದ/ ಹಂಚಿಕೆಯಾದ ನಿವೇಶನಗಳ ಬದಲಿಯಾಗಿ ವಿವಿಧ ಬಡಾವಣೆಗಳಲ್ಲಿ ಹಂಚಿಕೆ ಮಾಡಿರುವ ನಿವೇಶನಗಳು ಎಷ್ಟು; (ವ್ಯಕ್ತಿ, ಮೊದಲು ಹಂಚಿಕೆಯಾದ ನಿವೇಶನ, ಸ್ಥಳ, ವಿಸ್ತೀರ್ಣ, ಪಾವತಿಸಿಕೊಂಡ ಮೊಬಲಗು, ನಂತರದಲ್ಲಿ ಹಂಚಿಕೆಯಾದ ನಿವೇಶನ, ಸ್ಥಳ, ನಿವೇಶನ ಬದಲಿಗೆ ನೀಡಲಾದ ಕಾರಣ ಇವುಗಳ ಸಂಪೂರ್ಣ ವಿವರಗಳನ್ನು ಪ್ರತ್ಯೇಕವಾಗಿ ಒದಗಿಸುವುದು)

(ಆ) ಬದಲಿ ನಿವೇಶನ/ಜಮೀನು ಹಂಚಿಕೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನುಸರಿಸುತ್ತಿರುವ ಮಾನದಂಡ ಏನು;

(ಇ) ನಿವೇಶನ/ಜಮೀನು ಬದಲಿ ಹಂಚಿಕೆಯಲ್ಲಿ ವ್ಯಾಪಕ ಭ್ರಷ್ಟಾಚಾರ, ಹಗರಣ ನಡೆದಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ವ್ಯಕ್ತಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳು ಏನು; (ಪ್ರತ್ಯೇಕವಾದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಈ) ಬೆಂಗಳೂರು ನಗರದ ಮಡಿವಾಳ ಗ್ರಾಮದ ಸರ್ವೆ ನಂಬರ್ ೫೩ರಲ್ಲಿನ ೩೩ ಗುಂಟೆ ಜಮೀನಿನ ಮರು ಮಂಜೂರಾತಿ

ಪ್ರಕ್ರಿಯೆಯಲ್ಲಿ ನಡೆದಿರುವ ಲೋಪ ಮತ್ತು ಇದರಿಂದಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಆಗಿರುವ ನಷ್ಟದ ಅಂದಾಜು ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಕಾವೇರಿ ನೀರಾವರಿ ನಿಗಮದಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೩ (೪೪೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಕಾವೇರಿ ನೀರಾವರಿ ನಿಗಮದಿಂದ ಹಾರಂಗಿ ಯೋಜನಾ ವೃತ್ತದ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿರುವ ಕಾಮಗಾರಿಗಳು ಯಾವುವು; ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಸರ್ಕಾರ ನಿಗದಿಪಡಿಸಿರುವ Ratioಗಿಂತ ಹೆಚ್ಚಿನ ಹಣವನ್ನು ಬಿಡುಗಡೆ ಮಾಡಿ ಸರ್ಕಾರದ ಹಣವನ್ನು ದುರುಪಯೋಗ ಮಾಡಿಕೊಂಡಿರುವ ಬಗ್ಗೆ ಮತ್ತು ಈ ಕಾಮಗಾರಿಗಳಲ್ಲಿ ಬಹಳಷ್ಟು ಲೋಪದೋಷಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳು ಯಾವುವು; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ

ಹಂತಗಳಲ್ಲಿವೆ; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಎತ್ತಿನಹೊಳೆ ಯೋಜನೆಯ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೪ (೪೪೪) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಯೋಜನೆಗಾಗಿ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಎತ್ತಿನಹೊಳೆ ಯೋಜನೆಯಡಿ ರಾಜ್ಯದಾದ್ಯಂತ ಕೈಗೆತ್ತಿಕೊಳ್ಳಲಾಗಿರುವ ಪೈಪ್‌ಲೈನ್ ಮತ್ತು ಚಾನಲ್ ನಿರ್ಮಾಣ ಕಾಮಗಾರಿಗಳು ಯಾವುವು; ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಎತ್ತಿನಹೊಳೆ ಯೋಜನೆಯಡಿ ರಾಜ್ಯದಾದ್ಯಂತ ಕೈಗೊಂಡಿರುವ ಸಮುದಾಯ ಭವನ ನಿರ್ಮಾಣ /ರಸ್ತೆ ನಿರ್ಮಾಣ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ಯಾವ ಗ್ರಾಮಗಳಲ್ಲಿ ಕೈಗೊಳ್ಳಲಾಗಿದೆ; ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಈ) ಎತ್ತಿನಹೊಳೆ ಯೋಜನೆಯಡಿ ಪೈಪ್‌ಲೈನ್ ಮತ್ತು ಚಾನಲ್ ನಿರ್ಮಾಣದಂತಹ ಅಗತ್ಯ ಕಾಮಗಾರಿಗಳು ಬಹಳ ಕುಂಠಿತಗೊಂಡಿದ್ದು, ಸಮುದಾಯ ಭವನ ನಿರ್ಮಾಣ/ರಸ್ತೆ ನಿರ್ಮಾಣ ಕಾಮಗಾರಿಗಳಂತಹ ಇತರೆ ಕಾಮಗಾರಿಗಳೆ ಹೆಚ್ಚಾಗಿ ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು)

## ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೫ (೪೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಸ್ಕಾಂ ವತಿಯಿಂದ ಕಳೆದ ೩ ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು; ಈ ಕಾಮಗಾರಿಗಳ ಟೆಂಡರ್ ಮೊತ್ತವೆಷ್ಟು; ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರ ವಿವರಗಳೇನು; (ಆದೇಶ ಸಹಿತ ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ಟೆಂಡರ್ ಅನ್ನು ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಮಾಡಲಾಗಿದ್ದು, under ground cable ಅಳವಡಿಸುವ ಕಾಮಗಾರಿಗಳಲ್ಲಿ ಭಾರಿ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು)

## ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೬ (೪೪೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಸೋಲಾರ್/ವಿದ್ಯುತ್ ಚಾಲಿತ ಕೊಳವೆ ಬಾವಿಗಳನ್ನು ಕೊರೆಸಲು ನಿಗದಿಪಡಿಸಿರುವ ಆರ್ಥಿಕ ಮತ್ತು ಭೌತಿಕ ಗುರಿಗಳೇನು; ಈ ಯೋಜನೆಯಡಿ ನಿರ್ಮಿಸಲಾದ ಸೋಲಾರ್/ವಿದ್ಯುತ್ ಚಾಲಿತ ಕೊಳವೆ ಬಾವಿಗಳೆಷ್ಟು; ಇದಕ್ಕಾಗಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ? (ಫಲಾನುಭವಿ ಹೆಸರು, ಜಾತಿ, ಗ್ರಾಮ, ಹೋಬಳಿ, ತಾಲ್ಲೂಕು ವಿವರ ನೀಡುವುದು)

## ಕೆರೆ ಒತ್ತುವರಿಯ ಸರ್ವೇಯನ್ನು ನಡೆಸುವ ಬಗ್ಗೆ

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೫೭ (೪೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕೆರೆಗಳ ಒತ್ತುವರಿಯನ್ನು ಗುರುತಿಸಲು ಸರ್ವೇ ಕಾರ್ಯ ಕೈಗೊಳ್ಳಲಾಗಿದೆಯೇ :

(ಆ) ಇದುವರೆಗೆ ಎಷ್ಟು ಕೆರೆಗಳ ಸರ್ವೇ ಕಾರ್ಯ ನಡೆಸಿ ಒತ್ತುವರಿಯನ್ನು ಗುರುತಿಸಲಾಗಿದೆ ;

(ಇ) ಕೆರೆಗಳ ಒತ್ತುವರಿಯನ್ನು ಗುರುತಿಸಿ ಬಾಂದು ಕಲ್ಲುಗಳನ್ನು ನೆಟ್ಟು ಒತ್ತುವರಿಯನ್ನು ತೆರವುಗೊಳಿಸುವ ಕಾರ್ಯವನ್ನು ತ್ವರಿತಗೊಳಿಸಲಾಗುವುದೇ ;

(ಈ) ಕೆರೆಗಳ ಒತ್ತುವರಿದಾರರ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ ?

## ವಿದೇಶಿ ಪ್ರಜೆಗಳ ಅತಿಕ್ರಮ ವಾಸ ಮತ್ತು ಡ್ರಗ್ಸ್ ದಂಧೆ ಬಗ್ಗೆ

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೫೮ (೪೩೫) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಮ್ಮ ರಾಜ್ಯದಲ್ಲಿ ಎಷ್ಟು ವಿದೇಶಿ ಪ್ರಜೆಗಳು ಅವಧಿ ಮೀರಿ ವಾಸವಾಗಿದ್ದಾರೆ : (ಜಿಲ್ಲಾವಾರು ಅವರ ಹೆಸರು ಮತ್ತು ರಾಷ್ಟ್ರೀಯತೆಯ ವಿವರಗಳನ್ನು ನೀಡುವುದು)

(ಆ) ಡ್ರಗ್ಸ್ ಮಾರಾಟಕ್ಕಾಗಿ ಎಷ್ಟು ಜನ ವಿದೇಶಿಯರನ್ನು ದಸ್ತಗಿರಿ ಮಾಡಲಾಗಿದೆ ;

(ಇ) ಅವರನ್ನು ಪತ್ತೆ ಹಚ್ಚಿ ಆಯಾ ದೇಶಗಳಿಗೆ ಗಡೀಪಾರು ಮಾಡಲು ಒಳಾಡಳಿತ ಇಲಾಖೆಯು ತೆಗೆದುಕೊಂಡ ಕ್ರಮವೇನು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಚಟುವಟಿಕೆಗಳ ಬಗ್ಗೆ

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೫೯ (೪೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅತಿ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದ ಅವಶ್ಯಕತೆಗಳನ್ನು ಪೂರೈಸಲು ಬಿ.ಡಿ.ಎ., ಮುಂದಿರುವ ಯೋಜನೆಗಳೇನು:

(ಆ) ಹೊಸ ಬಡಾವಣೆಗಳನ್ನು ರಚಿಸಲು ಭೂ ಸ್ವಾಧೀನ ಮಾಡಿಕೊಳ್ಳುವ ಯಾವುದಾದರೂ ಪ್ರಸ್ತಾವನೆ ಇದೆಯೇ ;

(ಇ) ವೈಯಕ್ತಿಕ ನಿವೇಶನ ಹಂಚಿಕೆಗೆ ಬದಲಾಗಿ ಹೊಸದಾಗಿ ರಚಿಸಲಾದ ಬಡಾವಣೆಗಳಲ್ಲಿ ಬಿ.ಡಿ.ಎ., ಎತ್ತರದ ಬಹುಮಹಡಿ ಕಟ್ಟಡಗಳನ್ನು ನಿರ್ಮಿಸಲು ಯೋಚಿಸುತ್ತಿದೆಯೇ ?

## ನೌಕರರ ಸರ್ಕಾರಿ ಜೀವವಿಮೆಯಲ್ಲಿನ ತೊಡಕುಗಳ ಬಗ್ಗೆ

**ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೬೦ (೪೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಜಿ.ಐ.ಡಿ., ಯಲ್ಲಿರುವ ನೌಕರರ ಅತೀ ಮುಖ್ಯ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು:

(ಆ) ಸರ್ಕಾರಿ ನೌಕರರ ನಿಯತಕಾಲಿಕ ಅವಧಿ ಮುಕ್ತಾಯದ ಕ್ಲೇಮುಗಳನ್ನು ಇತ್ಯರ್ಥಪಡಿಸುವಲ್ಲಿ ಮತ್ತು ಸಾಲ ನೀಡಿಕೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಇ) ಸರ್ಕಾರಿ ನೌಕರರ ಅವಧಿ ಮುಕ್ತಾಯದ ಕ್ಲೇಮುಗಳ ಇತ್ಯರ್ಥಪಡಿಸುವಿಕೆ ಮತ್ತು ಸಾಲ ನೀಡಿಕೆಯನ್ನು ತ್ವರಿತಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## B.M.R.C.L ನಲ್ಲಿ ರೈಲ್ವೆ ನಿಲ್ದಾಣಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೧ (೪೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೆಟ್ರೋ ರೈಲ್ವೆ ನಿಗಮ (BMRCL) ದಲ್ಲಿ ಎಷ್ಟು ರೈಲು ನಿಲ್ದಾಣಗಳಿವೆ; ಇವುಗಳಿಗೆ ಯಾವ ಹೆಸರುಗಳನ್ನು ಇಡಲಾಗಿದೆ; ಹೆಸರುಗಳನ್ನು ನೀಡಲು ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಆ) ಗ್ರೌಟಿಂಗ್ (Grouting) ಎಂದರೇನು; ಮೆಟ್ರೋ ರೈಲಿನ ಪಥದಲ್ಲಿ ಎಷ್ಟು ಪಿಲ್ಲರ್‌ಗಳಿವೆ; ಇವುಗಳ ಸರಾಸರಿ ಆಯಸ್ಸು ಎಷ್ಟು;

(ಇ) ಎಷ್ಟು ಪಿಲ್ಲರ್‌ಗಳಿಗೆ ಈಗಾಗಲೇ ಗ್ರೌಟಿಂಗ್ ಮಾಡಲಾಗಿರುತ್ತದೆ; ಒಂದು ಪಿಲ್ಲರ್‌ಗೆ ತಗಲುವ ವೆಚ್ಚವೆಷ್ಟು; ಇದರ ಸಂಬಂಧ ಎಷ್ಟು ಹಣ ಖರ್ಚು ಮಾಡಲಾಗಿದೆ; ಗ್ರೌಟಿಂಗ್ ಕಾಮಗಾರಿ ಮಾಡಿರುವ ಏಜೆನ್ಸಿ ಯಾರು; ಗ್ರೌಟಿಂಗ್ ಮಾಡುವ ಅವಶ್ಯಕತೆ ಇತ್ತೆ ? (ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)

## ನೀರಾವರಿ ನಿಗಮಗಳಿಗೆ SCP/TSP ಕಾಮಗಾರಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೨ (೪೫೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರಿ ಮತ್ತು ಮಧ್ಯಮ ನೀರಾವರಿ ವ್ಯಾಪ್ತಿಯಲ್ಲಿ ಬರುವ ನಿಗಮಗಳಾವುವು; ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು

ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ; ಯಾವುವು; (ವಿವರವಾಗಿ ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಕಾವೇರಿ ನೀರಾವರಿ ನಿಗಮ ಮತ್ತು ವಿಶ್ವೇಶ್ವರಯ್ಯ ಜಲ ನಿಗಮದ ವ್ಯಾಪ್ತಿಗೆ ತುಮಕೂರು ಜಿಲ್ಲೆಯ ಯಾವ ಯಾವ ಪ್ರದೇಶಗಳು ಬರುತ್ತವೆ; (ತಾಲ್ಲೂಕುವಾರು/ ಹೋಬಳಿ/ ಪಂಚಾಯತಿವಾರು ಮಾಹಿತಿ ನೀಡುವುದು)

(ಇ) ಈ ನಿಗಮಗಳಿಗೆ ೨೦೧೯–೨೦ ನೇ ಸಾಲಿನಲ್ಲಿ ನಿರ್ದಿಷ್ಟಪಡಿಸಿದ ಒಟ್ಟಾರೆ ಹಣವೆಷ್ಟು; ಇದರಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳಿಗೆ ಮೀಸಲಿಟ್ಟ ಅನುದಾನವೆಷ್ಟು; ಅನುದಾನವನ್ನು ನಿಗಮಗಳಿಗೆ ಈಗಾಗಲೇ ಬಿಡುಗಡೆ ಮಾಡಲಾಗಿದೆಯೇ; ಮಾಡಿಲ್ಲದಿದ್ದಲ್ಲಿ, ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು; (ವಿವರವಾದ ಮಾಹಿತಿ ನೀಡುವುದು)

(ಈ) ಪ್ರಸ್ತುತ ಆರ್ಥಿಕ ವರ್ಷ ಅಂತ್ಯವಾಗುತ್ತಿದ್ದರೂ, ಇನ್ನೂ ಯಾವುದೇ ಅನುದಾನ ಬಿಡುಗಡೆ ಮಾಡದಿರುವುದರಿಂದ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳಿಗೆ ಹಿನ್ನಡೆಯಾಗುವುದಿಲ್ಲವೆ ? (ವಿವರವಾದ ಮಾಹಿತಿ ನೀಡುವುದು)

## ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವಿಧರರ ಕ್ಷೇತ್ರ) :–**

೩೬೩ (೩೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಕೇಂದ್ರ ಕಛೇರಿ ಮತ್ತು ಸದರಿ ಕಂಪನಿಯ ಅಧೀನದ ಕಛೇರಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮಕೈಗೊಂಡಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು ?

## ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಗೆ ವಕೀಲರನ್ನು ನೇಮಿಸುವ ಬಗ್ಗೆ

**ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೩೬೪ (೪೫೪) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾನೂನು ಇಲಾಖೆಯ ಅಡಿಯಲ್ಲಿ ಸರ್ಕಾರಿ ಸ್ವಾಮ್ಯದಲ್ಲಿರುವ ಬೇರೆ ಬೇರೆ ಸಂಸ್ಥೆಗಳಿಗೆ ಸರ್ಕಾರ ವಕೀಲರನ್ನು ನೇಮಿಸುವ ಪ್ರಕ್ರಿಯೆಗೆ ಇರುವ ಮಾನದಂಡಗಳೇನು;

(ಆ) ಈ ಮಾನದಂಡಗಳಿಗೆ ಬದಲಾಗಿ ಅರ್ಹತಾ ಪರೀಕ್ಷೆ ಮುಖಾಂತರ ಮೇಲ್ಕಂಡ ಸಂಸ್ಥೆಗಳಿಗೆ ವಕೀಲರನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## K.C ವ್ಯಾಲಿ ಯೋಜನೆ ಬಗ್ಗೆ

**ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೬೫ (೪೭೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಸಿ ವ್ಯಾಲಿ ಯೋಜನೆ ಪ್ರಾರಂಭ ಆಗಿದ್ದು, ಯಾವಾಗ; ಈ ಯೋಜನೆಯ ರೂಪುರೇಷೆಗಳೇನು;

(ಆ) ಮೊದಲನೇ ಹಂತದ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು;

(ಇ) ಎರಡನೇ ಹಂತದ ಯೋಜನೆಯನ್ನು ರೂಪಿಸಲು ಸರ್ಕಾರ ಚಿಂತಿಸಿದೆಯೇ;

(ಈ) ಎರಡನೇ ಯೋಜನೆ ಮುಖಾಂತರ ಇನ್ನುಳಿದ ಕೆರೆಗಳಿಗೆ ನೀರನ್ನು ತುಂಬಿಸಲು ಸರ್ಕಾರ ಯೋಚಿಸಿದೆಯೇ;

(ಉ) ಈ ಯೋಜನೆಗಾಗಿ ಸರ್ಕಾರ ಮೀಸಲಿಟ್ಟ ಹಣ ಎಷ್ಟು; ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಕೆ.ಆರ್.ಪುರ ಬೆನ್ನಿಗಾನಹಳ್ಳಿ ಕೆರೆ ಅಭಿವೃದ್ಧಿಯ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೬ (೪೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಆರ್.ಪುರ ವಿಧಾನ ಸಭಾ ಕ್ಷೇತ್ರದಲ್ಲಿನ ವಾರ್ಡ್-೫೬ರಲ್ಲಿ ಇರುವ ಬೆನ್ನಿಗಾನಹಳ್ಳಿ ಕೆರೆ ಕಲುಷಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆನ್ನಿಗಾನಹಳ್ಳಿ ಕೆರೆಯನ್ನು ಹತ್ತು ತಿಂಗಳ ಹಿಂದೆ ಅಭಿವೃದ್ಧಿಪಡಿಸಿ ಸರಿಯಾದ ಸಮರ್ಪಕ ನಿರ್ವಹಣೆ ಮಾಡದೆ ಸರ್ಕಾರದ ಹಣವನ್ನು ಪೋಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬೆನ್ನಿಗಾನಹಳ್ಳಿ ಕೆರೆ ಮತ್ತೆ ಅವಸಾನದ ಹಾದಿ ಹಿಡಿದಿದ್ದು, ಸದರಿ ಕೆರೆಯು ಮಳೆ ಬಂದಾಗ ಕೆರೆಯ ದಡದ ಮೇಲಿನ ಮಣ್ಣು ಕೆರೆಗೆ ಸೇರುತ್ತಿದ್ದು, ಕೆರೆಯ ಬದಿಯಲ್ಲಿರುವ ಕಲ್ಲು ಬೆಂಚುಗಳು ಮುರಿದು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸದರಿ ಕೆರೆಯನ್ನು ಅಭಿವೃದ್ಧಿ ಪಡಿಸಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## PSI, RSI PC ನೇಮಕಾತಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೭ (೪೮೩) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಪೋಲಿಸ್ ಇಲಾಖೆಯಲ್ಲಿ ಯಾವುದೇ ಹುದ್ದೆಗಳ (**PSI,RSI PC**) ನೇಮಕಾತಿ ಮಾಡಿಕೊಳ್ಳುವಾಗ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವಾಗ ಅರ್ಜಿ ನಮೂನೆಯಲ್ಲಿ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿಲ್ಲದೇ ಇರುವುದು ನಿಜವೇ; (ಕಾರಣಗಳೇನು)

(ಆ) **KPSC, KEA** ಹಾಗೂ ಇನ್ನಿತರೆ ಪರೀಕ್ಷಾ ಪ್ರಾಧಿಕಾರ ಸಂಸ್ಥೆಗಳು ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಲು ಅವಕಾಶವನ್ನು ನೀಡುತಿದ್ದು ಈ ಪದ್ದತಿಯು **KSP** ಗೆ ಏಕೆ ಅನ್ವಯಿಸುವುದಿಲ್ಲ;

(ಇ) ರಾಜ್ಯದ ಲಕ್ಷಾಂತರ ಬಡ ಅಭ್ಯರ್ಥಿಗಳು ಓದು ಮತ್ತು ಕೆಲಸಕ್ಕಾಗಿ ಬೆಂಗಳೂರು, ಧಾರವಾಡದಂತಹ ದೂರದ ಊರಿಗೆ ವಲಸೆ ಬರುತ್ತಿದ್ದು, ಇಂತಹ ಅಭ್ಯರ್ಥಿಗಳಿಗೆ ಪರೀಕ್ಷೆಯನ್ನು ಬರೆಯಲು ಅವರ ದೂರದ ಊರುಗಳಿಗೆ ಹೋಗಲು ಆಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇದರಿಂದ ಎಷ್ಟೋ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗದೆ ಅವಕಾಶ ವಂಚಿತರಾಗುತ್ತಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ?

## ಗೃಹ ರಕ್ಷಕದಳದವರ ವೇತನ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೬೮ (೩೯೧) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ರಕ್ಷಕದಳದವರ ಒಟ್ಟು ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಗೃಹ ರಕ್ಷಕದಳದವರು ಯಾವ ಯಾವ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ;

(ಇ) ಬೆಂಗಳೂರು ನಗರ ಪೊಲೀಸ್, ಸಿವಿಲ್ ಹಾಗೂ ಟ್ರಾಫಿಕ್‌ನಲ್ಲಿ ಮತ್ತು ಇತರೆಡೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ನೀಡುತ್ತಿರುವ ವೇತನ ಹಾಗೂ ಇತರೆ ಭತ್ಯೆಗಳಾವುವು ? (ವಿವರ ನೀಡುವುದು)

## ಸೋಲಾರ್ ಮತ್ತು ವಿಂಡ್ ಘಟಕಗಳ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೩೬೯ (೩೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಉದ್ದಗಲಕ್ಕೂ ಸ್ಥಾಪನೆಗೊಂಡ ಸೋಲಾರ್ ಮತ್ತು ವಿಂಡ್ ಘಟಕಗಳೆಷ್ಟು ; ಎಲ್ಲಿ ಯಾರು ಯಾರು ಸ್ಥಾಪನೆ ಮಾಡಿರುತ್ತಾರೆ ; ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿರುವ ಪ್ರಮಾಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉತ್ಪಾದನೆಯಾಗುವ ಸೋಲಾರ್ ಮತ್ತು ವಿಂಡ್ ವಿದ್ಯುತ್‌ಚ್ಛಕ್ತಿಯನ್ನು ಯಾವ ಯಾವ ದರದಲ್ಲಿ ಸರ್ಕಾರ ಉದ್ದಿಮೆದಾರರಿಂದ ಖರೀದಿಸುತ್ತದೆ ; (ಘಟಕವಾರು ವಿವರ ನೀಡುವುದು)

(ಇ) ಖರೀದಿಸಿದ ವಿದ್ಯುತ್‌ಚ್ಛಕ್ತಿಯನ್ನು ಯಾವ ದರದಲ್ಲಿ ಗ್ರಾಹಕರಿಗೆ ಸರ್ಕಾರ ಒದಗಿಸುತ್ತದೆ ? (ವಿವರ ನೀಡುವುದು)

## ಮಾಂಜ್ರಾ ಸರಣಿ ಬ್ಯಾರೇಜ್ ಕಾಮಗಾರಿಯ ಲೋಪದೋಷ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೦ (೪೬೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಮಾಂಜ್ರಾ ಸರಣಿ ಬ್ರಾರೇಜ್‌ಗಳಲ್ಲಿನ ಗೇಟ್ ಸಮಸ್ಯೆಯಾಗಿ, ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ಸ್ಪಷ್ಟ ಮಾಹಿತಿ ಒದಗಿಸುವುದು ;

(ಆ) ನಾಲ್ಕು ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣ ಎಷ್ಟು ; ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ನೂರಾರು ಕೋಟಿ ರೂಪಾಯಿಗಳು ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಎಸಗಿದ್ದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ನೀರಾವರಿ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೧ (೪೬೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಜಲಸಂಪನ್ಮೂಲ ಇಲಾಖೆಯ ವತಿಯಿಂದ ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ಬೀದರ್ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; (ಲೆಕ್ಕಶೀರ್ಷಿಕೆಗಳೊಂದಿಗೆ ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಮಂಜೂರಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಹಾಗೂ ಅವು ಯಾವ ಹಂತದಲ್ಲಿದೆ ; (ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು, ಕಾಮಗಾರಿವಾರು ಗುತ್ತಿಗೆದಾರೊಂದಿಗೆ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಪೂರ್ಣಗೊಂಡ ಕಾಮಗಾರಿಗಳು ಮತ್ತು ಬಳಕೆಯಾದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಅಪೂರ್ಣಗೊಂಡ ಕಾಮಗಾರಿಗಳು ಯಾವುವು ? (ವಿಧಾನ ಸಭಾ ಕ್ಷೇತ್ರವಾರು ಸ್ಪಷ್ಟ ಮಾಹಿತಿ ನೀಡುವುದು)

## ಅಗ್ನಿಶಾಮಕ ಠಾಣೆಗಳನ್ನು ಸ್ಥಾಪಿಸುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೨ (೪೬೩) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಬರುವ ಕಮಲಾನಗರ, ಚಿಟ್ಟಾಗುಪ್ಪಾ, ಹುಲಸೂರು ಹೊಸ ತಾಲ್ಲೂಕುಗಳಿಗೆ ಅಗ್ನಿಶಾಮಕ ಠಾಣೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಎಷ್ಟು ಕಾಲಮಿತಿಯೊಳಗಾಗಿ ಹೊಸ ಅಗ್ನಿಶಾಮಕ ಠಾಣೆಗಳನ್ನು ಮಂಜೂರು ಮಾಡಲಾಗುವುದು ; (ಸ್ಪಷ್ಟ ವಿವರ ನೀಡುವುದು)

## ರಾಜ್ಯದ ಗ್ರಾಮೀಣಾ ಪ್ರದೇಶಗಳಲ್ಲಿ ಸುಟ್ಟುಹೋಗಿರುವ ವಿದ್ಯುತ್ ಪರಿವರ್ತಕಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೩ (೪೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಸುಟ್ಟುಹೋಗಿರುವ ವಿದ್ಯುತ್ ಪರಿವರ್ತಕಗಳನ್ನು ಬದಲಾಯಿಸುವಲ್ಲಿ ವಿಳಂಬವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಿದ್ಯುತ್ ಪರಿವರ್ತಕಗಳನ್ನು ಬದಲಾಯಿಸುವ ಸಮಯದಲ್ಲಿ ವಿಳಂಬದಿಂದಾಗಿ ರೈತರ ಬೆಳೆ ಹಾಳಾಗಿ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರದ ಕ್ರಮವೇನು;

(ಇ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗಾಗಿ ಅಳವಡಿಸಿರುವ ವಿದ್ಯುತ್ ಪರಿವರ್ತಕಗಳು ಸುಟ್ಟುಹೋದಾಗ ಎಷ್ಟು ದಿನಗಳಲ್ಲಿ ಬದಲಾಯಿಸಲಾಗುವುದು; (ವಿವರ ನೀಡುವುದು)

(ಈ) ಕುಡಿಯುವ ನೀರಿಗೆ ಅಳವಡಿಸಿರುವ ವಿದ್ಯುತ್ ಪರಿವರ್ತಕಗಳು ಸುಟ್ಟುಹೋದರೆ ಸರ್ಕಾರದಿಂದ ತಾತ್ಕಾಲಿಕವಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿರುವುದು ಎಂಬುದರ ಕುರಿತು ಮಾಹಿತಿ ನೀಡುವುದು;

(ಉ) ಮುಂದೆ ಬರುವ ಬೇಸಿಗೆಯಲ್ಲಿ ಉದ್ಭವಿಸುವ ವಿದ್ಯುತ್ ಕೊರತೆ ನೀಗಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳಾವುವು ? (ಮಾಹಿತಿ ನೀಡುವುದು)

## ೨೦೧೯ರ KPTCL ನೇಮಕಾತಿಯ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೪ (೪೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಿದ್ಯುತ್ ಸರಬರಾಜು ನಿಗಮ ನಿಯಮಿತ ಮಂಡಳಿಯು ೨೦೧೯ರ ಫೆಬ್ರವರಿ ೨೦ ರಂದು ಖಾಲಿಯಿದ್ದ

AEE,AE,JE,JPA,JA ಸೇರಿದಂತೆ ಒಟ್ಟು ೩೬೪೬ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ ೨ ವರ್ಷಗಳೇ ಕಳೆದರು ಕೂಡ ನೇಮಕಾತಿ ಪ್ರಕ್ರಿಯೆ ನಡೆಸದೇ ಇರಲು ಕಾರಣವೇನು;

(ಆ) ಅಲ್ಲದೇ ಹಠಾತ್ತನೆ ದಿನಾಂಕ:೨೧-ನವೆಂಬರ್-೨೦೨೦ ರಂದು ಈ ಹುದ್ದೆಗಳ ನೇಮಕಾತಿಯನ್ನು ಕೆಲವು ಆಡಳಿತಾತ್ಮಕ ಕಾರಣವನ್ನು ನೀಡಿ ರದ್ದುಗೊಳಿಸಲು ಕಾರಣವೇನು;

(ಇ) ಇನ್ನುಳಿದ ಇಲಾಖೆಗಳ ನೇಮಕಾತಿಗಳು ನಡೆಯುತ್ತಿದ್ದರೂ ಕೂಡ ಕೇವಲ ಈ ಇಲಾಖೆಯ ನೇಮಕಾತಿಯನ್ನು ಮಾತ್ರ ತಡೆಹಿಡಿದು ರದ್ದುಗೊಳಿಸಲು ಕಾರಣವೇನು;

(ಈ) ಅಲ್ಲದೇ ರಾಜ್ಯದ ಲಕ್ಷಾಂತರ ಅಭ್ಯರ್ಥಿಗಳು ಈ ಇಲಾಖೆಯ ಬೇರೆ ಬೇರೆ ಹುದ್ದೆಗಳಿಗೆ ಪ್ರತ್ಯೇಕವಾಗಿ ೫೦೦ ರೂ ನಂತೆ ಪರೀಕ್ಷಾ ಶುಲ್ಕವನ್ನು ಭರಿಸಿದ್ದು, ಇದನ್ನು ಸರ್ಕಾರ ಮರುಪಾವತಿ ಮಾಡುತ್ತದೆಯೆ ; ಮರುಪಾವತಿ ಮಾಡುತ್ತೀರಿ ಎಂದಾದಲ್ಲಿ, ಹೇಗೆ ಮತ್ತು ಯಾವಾಗ ಮರುಪಾವತಿಸಲಾಗುವುದು ? (ವಿವರ ನೀಡುವುದು)

## ರಾಜ್ಯದ ಒಳಾಡಳಿತ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೩೭೫ (೪೧೨) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಒಳಾಡಳಿತ ಇಲಾಖೆಯು ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆ, ನಿಗಮ ಮತ್ತು ಮಂಡಳಿಗಳು ಯಾವುವು; (ಅವುಗಳ ಪೂರ್ಣ ವಿವರಗಳನ್ನು ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ಒಳಾಡಳಿತ ಇಲಾಖೆಯ ಅನುದಾನದ ಬೇಡಿಕೆ ಎಷ್ಟು; ಐದು ವರ್ಷದ ಆಯವ್ಯಯದಲ್ಲಿ ಒಳಾಡಳಿತ ಇಲಾಖೆಗೆ ನಿಗದಿಗೊಳಿಸಿದ, ಬಿಡುಗಡೆಗೊಳಿಸಿದ, ಖರ್ಚು ಮಾಡಿದ ಮತ್ತು ಉಳಿಕೆಯಾದ ಅನುದಾನ ಎಷ್ಟು; (ವರ್ಷವಾರು ಹಾಗೂ ಒಳಾಡಳಿತ ಇಲಾಖೆಯ ಅಧೀನದಲ್ಲಿರುವ ಇಲಾಖೆ, ನಿಗಮ ಮಂಡಳಿವಾರು ಸಂಕ್ಷಿಪ್ತ ವಿವರ ನೀಡುವುದು)

(ಇ) ಆಯವ್ಯಯದಲ್ಲಿ ನೀಡಲಾದ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲಾಗಿದೆಯೇ; (ವರ್ಷವಾರು, ಇಲಾಖೆ, ನಿಗಮ ಮತ್ತು ಮಂಡಳಿವಾರು ವಿವರ ನೀಡುವುದು)

(ಈ) ಹಾಗಿಲ್ಲದಿದ್ದಲ್ಲಿ, ಅನುದಾನವನ್ನು ಬಳಸಿಕೊಳ್ಳದೇ ಇರಲು ಕಾರಣಗಳೇನು; (ವರ್ಷವಾರು, ಇಲಾಖೆ, ನಿಗಮ ಮತ್ತು ಮಂಡಳಿವಾರು ವಿವರ ನೀಡುವುದು)

(ಉ) ಆಯವ್ಯಯದಲ್ಲಿ ನೀಡಲಾದ ಅನುದಾನದಲ್ಲಿ ಉಳಿಕೆಯಾದ ಅನುದಾನವನ್ನು ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತದಲ್ಲಿ ನಿಗದಿ ಠೇವಣಿ (ಫಿಕ್ಸೆಡ್ ಡಿಪಾಸಿಟ್) ರೂಪದಲ್ಲಿ ಇಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ಐದು ವರ್ಷಗಳಿಂದ ಎಷ್ಟು ಮೊತ್ತವನ್ನು ಯಾವ ಯಾವ ಇಲಾಖೆ, ನಿಗಮ, ಮಂಡಳಿಗಳು, ಠೇವಣಿ ರೂಪದಲ್ಲಿ ಇಡಲಾಗಿದೆ; (ವಿವರಗಳನ್ನು ವರ್ಷವಾರು ನೀಡುವುದು)

(ಊ) ಹಾಗಿದ್ದಲ್ಲಿ, ಇಲಾಖೆ ನಿಗಮ ಮಂಡಳಿಗಳು ಠೇವಣಿ ರೂಪದಲ್ಲಿ ಅನುದಾನವನ್ನು ಇಡಲು ಕಾರಣಗಳೇನು; ಅದನ್ನು ಯಾವ ಉದ್ದೇಶಗಳಿಗೆ ಬಳಸಿಕೊಳ್ಳಲಾಗುತ್ತಿದೆ ? (ವಿವರ ನೀಡುವುದು)

## ಸರ್ಕಾರಿ ನೌಕರರ ಒಂದು ಇಲಾಖೆಯಿಂದ ಹುದ್ದೆ ಮತ್ತು ವೃಂದ ಬದಲಾವಣೆ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೩೭೬ (೪೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಸೇವೆಗೆ ಸೇರಿ ಕಾರ್ಯನಿರ್ವಹಿಸುತ್ತಿರುವ ನೌಕರರು ಒಂದು ಇಲಾಖೆಯಿಂದ ಹುದ್ದೆ ಅಥವಾ ವೃಂದ ಬದಲಾವಣೆ ಮಾಡಿಕೊಂಡು ಅನ್ಯ ಇಲಾಖೆಗೆ ತೆರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕರ್ನಾಟಕ ನಾಗರಿಕ ಸೇವಾ ನಿಯಮಗಳಲ್ಲಿ ಈ ರೀತಿ ಬದಲಾವಣೆಗಳಿಗೆ ಅವಕಾಶಗಳಿದೆಯೇ; (ನಿಯಮಗಳ ಪೂರ್ಣ ವಿವರಗಳನ್ನು ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಹುದ್ದೆ ಹಾಗೂ ವೃಂದ ಬದಲಾವಣೆ ಮಾಡಿಕೊಂಡು ಇಲಾಖೆ ಬದಲಾವಣೆ ಮಾಡಿಕೊಂಡಿರುವ ನೌಕರರ ಸಂಖ್ಯೆ ಎಷ್ಟು; (ನೌಕರರ ಹೆಸರಿನೊಂದಿಗೆ ಯಾವ ಇಲಾಖೆಯಿಂದ ಯಾವ ಇಲಾಖೆಗೆ ಬದಲಾವಣೆ ಮಾಡಿಕೊಂಡಿರುತ್ತಾರೆ ಎಂಬ ಪೂರ್ಣ ವಿವರಗಳನ್ನು ನೀಡುವುದು)

(ಇ) ಸರ್ಕಾರಿ ಸೇವೆಗೆ ಸೇರಿದ ನಂತರ ಎಷ್ಟು ಬಾರಿ ಹುದ್ದೆ, ವೃಂದ ಮತ್ತು ಇಲಾಖೆ ಬದಲಾಯಿಸಬಹುದು; ಈ ರೀತಿ ಬದಲಾವಣೆಗೆ ಸಂಬಂಧಿಸಿದಂತೆ ಇರುವ ಮಾನದಂಡಗಳೇನು;

(ಈ) ಪ್ರಸಕ್ತ ಸಾಲಿನಲ್ಲಿ ಹುದ್ದೆ, ವೃಂದ ಮತ್ತು ಇಲಾಖೆ ಬದಲಾಯಿಸಲು ಬಂದಿರುವ ಅರ್ಜಿಗಳು ಎಷ್ಟು; (ಅರ್ಜಿದಾರರ ಹೆಸರಿನೊಂದಿಗೆ ಯಾವ ಇಲಾಖೆಯಿಂದ ಯಾವ ಇಲಾಖೆಗೆ ಬದಲಾವಣೆ ಕೋರಿದ್ದಾರೆ ಎಂಬುದರ ವಿವರಗಳನ್ನು ನೀಡುವುದು) ಈ ಅರ್ಜಿಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಸರ್ಕಾರ ಯಾವ ರೀತಿ ಕ್ರಮವಹಿಸಿದೆ ?

## I.M.A., ಹಗರಣದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೭ (೪೨೮) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಐ.ಎಂ.ಎ., ಹಗರಣದಲ್ಲಿ ನೇರವಾಗಿ ಭಾಗಿಯಾಗಿರುವ ಕುರಿತು ಸಿ.ಬಿ.ಐ., ನಿಂದ ಕೋರ್ಟ್‌ಗೆ ಆರೋಪ ಪಟ್ಟಿ ಸಲ್ಲಿಕೆಯಾಗಿರುವ ಎಷ್ಟು ಅಧಿಕಾರಿಗಳನ್ನು ಅಮಾನತ್ತುಗೊಳಿಸಲಾಗಿದೆ; ಹೆಸರು, ಹುದ್ದೆಯೊಂದಿಗೆ ವಿವರ ನೀಡುವುದು;

(ಆ) ಇದುವರೆಗೆ ಐ.ಎಂ.ಎ., ಹಗರಣದ ಸಂತ್ರಸ್ಥರಿಗೆ ಯಾವ ರೀತಿಯ ಪರಿಹಾರಗಳನ್ನು ನೀಡಲಾಗಿದೆ;

(ಇ) ಇದುವರೆಗೆ ಎಷ್ಟು ಜನರು ಮೋಸವಾಗಿರುವ ಕುರಿತು ದೂರು ನೀಡಿರುತ್ತಾರೆ; ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ?

## ಲವ್ ಜಿಹಾದ್ ಕಾನೂನು ಜಾರಿಗೆ ತರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೮ (೪೩೦) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲವ್ ಜಿಹಾದ್ ಕುರಿತು ಸರ್ಕಾರದ ನಿಲುವೇನು; ಮಾನ್ಯ ನ್ಯಾಯಾಲಯವು ಮದುವೆಯ ಕಾರಣಕ್ಕಾಗಿ ಮತಾಂತರವಾಗುವುದನ್ನು ಅಸಿಂಧು ಎಂದು ಘೋಷಿಸಿದ್ದು, ಇಂತಹ ಮದುವೆಗಳ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕಳೆದ ೮ ವರ್ಷಗಳಲ್ಲಿ ರಾಜ್ಯದಲ್ಲಿ ಅಂತರ್ ಧರ್ಮೀಯ ವಿವಾಹವಾಗಿ ಪರಿತ್ಯಕ್ತರಾದ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು; ಈ ಮಹಿಳೆಯರ ಸಂರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಧರ್ಮವನ್ನು ಮುಚ್ಚಿಟ್ಟು ಸುಳ್ಳು ಹೇಳಿ ಮದುವೆಯಾಗಿ ಆ ಬಳಿಕ ಹುಡುಗ ಮೋಸ ಮಾಡಿದ ಎಂಬ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು; ಆತ್ಮಹತ್ಯೆಗೆ ಕಾರಣರಾದ ವ್ಯಕ್ತಿಯ ಮೇಲೆ ಯಾವ ಕಾನೂನು ಕ್ರಮ ಕೈಗೊಳ್ಳಲಾಗಿದೆ ?

## F.S.L., ನಲ್ಲಿ ನಡೆದಿರುವ ನೇಮಕಾತಿ ಅಕ್ರಮದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೯ (೪೩೨) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಇಲಾಖೆಯ ಎಫ್.ಎಸ್.ಎಲ್.,ನಲ್ಲಿ ಎಮ್.ಎಸ್.ಸಿ., ಕಂಪ್ಯೂಟರ್ ಸೈನ್ಸ್ ಅಥವಾ ಎಮ್.ಟೆಕ್., ವಿಧ್ಯಾಬ್ಯಾಸದ ಅರ್ಹತೆ ಹೊಂದಿರಬೇಕಾದ ಫೋಟೋಗ್ರಾಫಿ ವಿಜ್ಞಾನ ಸಹಾಯಕರ ಹುದ್ದೆಗೆ ಸಿನಿಮಾಟೋಗ್ರಫಿಯಲ್ಲಿ ಡಿಪ್ಲೊಮೋ ವಿಧ್ಯಾಬ್ಯಾಸ ಹೊಂದಿರುವವರನ್ನು ನೇಮಕ ಮಾಡಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ; ಎಮ್.ಎಸ್.ಸಿ., ಕಂಪ್ಯೂಟರ್ ಸೈನ್ಸ್‌ಗೆ ಸಿನಿಮಾಟೋಗ್ರಫಿಯಲ್ಲಿ ಡಿಪ್ಲೊಮೋ ಸರಿಸಮಾನ ಎಂಬ ವರದಿಯನ್ನು ನೀಡಿದವರು ಯಾರು; ಈ ರೀತಿಯಾಗಿ ವಿಧ್ಯಾಭ್ಯಾಸದ ಅರ್ಹತೆಯನ್ನು ಕಡಿಮೆಗೊಳಿಸುವ ಅಧಿಕಾರ ಯಾರಿಗಿದೆ;

(ಆ) ಪೊಲೀಸ್ ಇಲಾಖೆಯ ಎಫ್.ಎಸ್.ಎಲ್.,ನಲ್ಲಿ ಸಿನಿಮಾಟೋಗ್ರಫಿಯಲ್ಲಿ ಡಿಪ್ಲೊಮೋ ವಿಧ್ಯಾಭ್ಯಾಸ ಹೊಂದಿದವರು ಓಓಡಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು ಡಿಸೆಂಬರ್ ೨೦೧೮ ರಲ್ಲಿ ಅರ್ಹ ವಿಧ್ಯಾಭ್ಯಾಸ ಪೂರ್ಣಗೊಳ್ಳುವುದಾಗಿ ಸದನಕ್ಕೆ ಲಿಖಿತ ಮಾಹಿತಿ ನೀಡಲಾಗಿದೆಯೇ; ಈ ಸರ್ಕಾರಿ ನೌಕರರು ಉನ್ನತ ಶಿಕ್ಷಣ ಪಡೆಯಲು ಸರ್ಕಾರದ ಅನುಮತಿ ಕೋರಿ ಮನವಿ ಸಲ್ಲಿಸಿರುತ್ತಾರೆಯೇ; ಸಲ್ಲಿಸಿದ್ದಲ್ಲಿ, ಸದರಿ ಮನವಿಯ ಪ್ರತಿ ಹಾಗೂ ಕಛೇರಿಯಲ್ಲಿ ಸದರಿ ಮನವಿಗಳನ್ನು ಸ್ವೀಕರಿಸಿದ ದಿನಾಂಕದೊಂದಿಗೆ ಮಾಹಿತಿ ನೀಡುವುದು ;

(ಇ) ಪೊಲೀಸ್ ಇಲಾಖೆಯ ಎಫ್.ಎಸ್.ಎಲ್.,ನಲ್ಲಿ ಸಿನಿಮಾಟೋಗ್ರಫಿಯಲ್ಲಿ ಡಿಪ್ಲೊಮೋ ವಿಧ್ಯಾಭ್ಯಾಸ ಹೊಂದಿದವರು ಓಓಡಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ಇವರಿಗೆ ದೂರ ಶಿಕ್ಷಣದ ಉನ್ನತ ಶಿಕ್ಷಣ ಪಡೆಯಲು ಸರ್ಕಾರ ಅನುಮತಿ ನೀಡಿದಲ್ಲಿ, ಸದರಿ ಆದೇಶದ ಪ್ರತಿ ನೀಡುವುದು; ಸದರಿಯವರಿಗೆ ಯಾವ ದಿನಾಂಕದಂದು ಉನ್ನತ ಶಿಕ್ಷಣ ಪಡೆಯಲು ಅನುಮತಿಸಲಾಗಿದೆ; ಸರ್ಕಾರದ ಅನುಮತಿ ಇಲ್ಲದೆ ಉನ್ನತ ಶಿಕ್ಷಣ ಮತ್ತು ಇತರೆ ಲಾಭದಾಯಕ ಕೆಲಸಕಾರ್ಯಗಳನ್ನು ನಿರ್ವಹಿಸುವುದು ಸರ್ಕಾರಿ ನೌಕರರ ನಡತೆ ನಿಯಮಾವಳಿಗೆ ಅನುಗುಣವಾಗಿದೆಯೇ; ಈ ಕುರಿತು ಸರ್ಕಾರದ ನಿಲುವೇನು ?

## ವಾಹನ ಪಾಸುಗಳನ್ನು ವಿತರಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೩೮೦ (೪೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖಾಸಗಿ ವ್ಯಕ್ತಿಗಳಿಗೆ ವಾಹನ ಪಾಸು ನೀಡಲು ಶಿಫಾರಸ್ಸು ಮಾಡುವವರು ಯಾರು; ಈ ರೀತಿಯಾಗಿ ಶಿಫಾರಸ್ಸು ಮಾಡಲು ಇರಬೇಕಾದ ಅರ್ಹತೆಗಳೇನು; ಖಾಸಗಿ ವ್ಯಕ್ತಿಗಳ ವಾಹನಗಳಿಗೆ ಯಾವ ಬಣ್ಣದ ಪಾಸುಗಳನ್ನು ನೀಡಲಾಗಿದೆ;

(ಆ) ವಿಧಾನ ಮಂಡಲದ ಹಾಲಿ ಸದಸ್ಯರು ವಿಧಾನ ಸೌಧ ಪ್ರವೇಶಿಸಲು ಅನುವಾಗುವಂತೆ ವಾಹನ ಪಾಸ್ ನೀಡಲು ಶಿಫಾರಸ್ಸು ಪತ್ರ ನೀಡಿದಲ್ಲಿ, ಸದರಿ ಪತ್ರವನ್ನು ಪರಿಗಣಿಸಬಾರದು ಎಂಬುದಾಗಿ ಆದೇಶ ನೀಡುವವರು ಯಾರು; ಈ ಕುರಿತು ಸರ್ಕಾರದ ಕ್ರಮವೇನು ;

(ಇ) ೨೦೨೦ರ ಸಾಲಿನಲ್ಲಿ ೨೯೬ ಖಾಸಗಿ ವ್ಯಕ್ತಿಗಳಿಗೆ ಪಾಸ್ ನೀಡಲು ಶಿಫಾರಸ್ಸು ಮಾಡಿದವರ ಹೆಸರು ಮತ್ತು ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು; ಯಾವ ಕಾರಣಗಳಿಗೆ ಖಾಸಗಿ ವ್ಯಕ್ತಿಗಳಿಗೆ ವಾಹನ ಪಾಸುಗಳನ್ನು ನೀಡಲಾಗಿದೆ ;

(ಈ) ೨೦೨೦ರ ಸಾಲಿನಲ್ಲಿ ೨೯೬ ಖಾಸಗಿ ವ್ಯಕ್ತಿಗಳಿಗೆ ವಿತರಿಸಿದ ಪಾಸ್‌ನಲ್ಲಿ ನಮೂದಿಸಿರುವ ಸಂಖ್ಯೆ, ವಾಹನ ಸಂಖ್ಯೆ, ಪಾಸು ಪಡೆದ ವಾಹನ ಮಾಲಿಕರ ಮೊಬೈಲ್ ಸಂಖ್ಯೆಯೊಂದಿಗೆ ಯಾವ ಕಾರಣಕ್ಕಾಗಿ ಪಾಸ್ ವಿತರಿಸಲಾಗಿದೆ ಎಂಬುದರ ಕುರಿತು ಸಂಪೂರ್ಣ ಮಾಹಿತಿ ನೀಡುವುದು ?

# ಭ್ರಷ್ಟಾಚಾರ, ಅಕ್ರಮ ಅವ್ಯವಹಾರಗಳಲ್ಲಿ ಬಾಗಿಯಾಗಿರುವ I.A.S., I.P.S.,ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೩೮೧ (೪೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭ್ರಷ್ಟಾಚಾರ, ಅಕ್ರಮ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಐ.ಎ.ಎಸ್., ಐ.ಪಿ.ಎಸ್., ಅಧಿಕಾರಿಗಳನ್ನು ಸರ್ಕಾರದ ಆಯಕಟ್ಟಿನ ಪ್ರಮುಖ ಸ್ಥಳಗಳಲ್ಲಿ ನಿಯುಕ್ತಿಗೊಳಿಸುವುದರಿಂದ ಸರ್ಕಾರದ ಘನತೆ, ಗೌರವ ಮತ್ತು ರಾಜ್ಯದ ಜನತೆ ಸರ್ಕಾರದ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ಕುಂದುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಐ.ಎಂ.ಎ., ಹಗರಣದಲ್ಲಿ ನೇರವಾಗಿ ಭಾಗಿಯಾಗಿರುವ ಕುರಿತು ಸಿ.ಬಿ.ಐ., ನಿಂದ ಕೋರ್ಟ್‌ಗೆ ಆರೋಪ ಪಟ್ಟಿ ಸಲ್ಲಿಕೆಯಾಗಿರುವ ಐ.ಎ.ಎಸ್., ಐ.ಪಿ.ಎಸ್., ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಸದರಿ ಅಧಿಕಾರಿಗಳನ್ನು ಆಯಕಟ್ಟಿನ ಜಾಗಕ್ಕೆ ನೇಮಿಸಲು ಕಾರಣಗಳೇನು; ಇದರಿಂದ ಐ.ಎಂ.ಎ., ಹಗರಣದ ತನಿಖೆ ಮತ್ತು ಸಾಕ್ಷಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವುದಿಲ್ಲವೆ; ಈ ಕುರಿತು ಸರ್ಕಾರದ ನಿಲುವೇನು;

(ಇ) ಐ.ಎಂ.ಎ., ಹಗರಣದಲ್ಲಿ ನೇರವಾಗಿ ಭಾಗಿಯಾಗಿರುವ ಕುರಿತು ಸಿ.ಬಿ.ಐ., ನಿಂದ ಕೋರ್ಟ್‌ಗೆ ಆರೋಪ ಪಟ್ಟಿ ಸಲ್ಲಿಕೆಯಾಗಿರುವ ಐ.ಎ.ಎಸ್., ಐ.ಪಿ.ಎಸ್., ಅಧಿಕಾರಿಗಳನ್ನು ಅಮಾನತ್ತುಗೊಳಿಸದಿರುಲು ಕಾರಣವೇನು; ಯಾವಾಗ ಅಮಾನತ್ತುಗೊಳಿಸಲಾಗುವುದು;

(ಈ) ಐ.ಎಂ.ಎ., ಹಗರಣದಲ್ಲಿ ಭಾಗಿಯಾಗಿರುವ ಮತ್ತು ಯಾವುದೇ ನಿರ್ಧಾರ ಮತ್ತು ಶಿಫಾರಸ್ಸುಗಳನ್ನು ಮಾಡಲು ಅಧಿಕಾರ ಹೊಂದಿರದ ಸರ್ಕಾರದ ಕೆಳ ಹಂತದ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಅಮಾನತ್ತು ಮಾಡಿ ಇಲಾಖಾ ವಿಚಾರಣೆಗೆ ಒಳಪಡಿಸಲು ಆದೇಶಿಸಿದ ಸರ್ಕಾರ ಐ.ಪಿ.ಎಸ್., ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಹಿಂಜರಿಯುತ್ತಿರುವುದು ಏಕೆ; ಈ ಕುರಿತು ಸರ್ಕಾರದ ನಿಲುವೇನು ?

## ಬೆಂಗಳೂರು ನಗರದಲ್ಲಿ ಸಂಚಾರ ದಟ್ಟಣೆ (ಟ್ರಾಫಿಕ್) ಕಡಿಮೆಗೊಳಿಸುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ) :-**

೩೮೨ (೪೪೧) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರವು ಟ್ರಾಫಿಕ್ ಸಂಚಾರ (ಸಂಚಾರ ದಟ್ಟಣೆಯ ಪ್ರಮಾಣದ) ವಿಷಯದಲ್ಲಿ ದೇಶದ ೨ನೇ ನಗರವೆಂದು ಖಾಸಗಿ ಸಂಸ್ಥೆಯವರು ನಡೆಸಿದ ಸಮೀಕ್ಷೆಯ ವರದಿ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ನಿಲುವೇನು;

(ಆ) ಸರ್ಕಾರಿ/ಖಾಸಗಿ ಬಸ್ಸುಗಳ ಚಾಲಕರು ನಿರ್ದಿಷ್ಟವಾದ ಜಾಗದಲ್ಲಿ ತಮ್ಮ ವಾಹನಗಳನ್ನು ನಿಲುಗಡೆ ಮಾಡದೇ ರಸ್ತೆಯಲ್ಲಿ ಅಡ್ಡಾದಿಡ್ಡಿ ನಿಲುಗಡೆ ಮಾಡಿ ರಸ್ತೆ ಸಂಚಾರದ ನಿಯುಮವನ್ನು ಉಲ್ಲಂಘಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ಚಾಲ್ತಿಯಲ್ಲಿರುವ ಮಾನದಂಡಗಳ ಕುರಿತು ವಿವರ ನೀಡುವುದು)

(ಇ) Peak hours ಅಂದರೆ ಬೆಳಿಗ್ಗೆ ೯ ಘಂಟೆಯಿಂದ ೧೧ ಘಂಟೆಯ ಅವಧಿಗೆ ಬೆಂಗಳೂರು ನಗರದ ಪ್ರಮುಖ ರಸ್ತೆಗಳಲ್ಲಿ ನಿಧಾನಗತಿಯಲ್ಲಿ ಚಲಿಸುವ ಮತ್ತು ಗೂಡ್ಸ್ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸುವ ಹಾಗೂ ನಗರದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಈ) ಸದರಿ ಸಮಯದಲ್ಲಿ ಅನ್ಯ ಜಿಲ್ಲೆ/ಅನ್ಯ ರಾಜ್ಯಗಳಿಂದ ಬೆಂಗಳೂರು ನಗರಕ್ಕೆ ಬರುವ ಎಲ್ಲಾ ರೀತಿಯ ವಾಹನಗಳನ್ನು ಬೆಂಗಳೂರು ನಗರದ ಹೊರವಲಯದಲ್ಲಿ ನಿಲ್ಲಿಸಿ ನಗರದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ವಿಷಯದ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು)

## ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಬಿಡುಗಡೆ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ) :-**

೩೮೩ (೪೪೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦೨೦ರ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನದಲ್ಲಿ ನಿಯಮದಂತೆ ರೂ.೨ ಕೋಟಿ ಬಿಡುಗಡೆ ಆಗಬೇಕಾಗಿದ್ದು, ಕೇವಲ ರೂ.೫೦ ಲಕ್ಷಗಳು ಮಾತ್ರ ಬಿಡುಗಡೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಸದರಿ ಬಾಕಿ ಅನುದಾನ ಬಿಡುಗಡೆಯ ವಿಳಂಬತೆಯಿಂದ ಹಲವು ಸಾರ್ವಜನಿಕ ಕಾಮಗಾರಿಗಳ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬ ತಪ್ಪಿಸಲು ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ೨೦೧೯-೨೦೨೦ರ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿನ ಪೂರ್ಣ ಅನುದಾನ ಬಿಡುಗಡೆಯಾಗದೇ ಇರುವುದಕ್ಕೆ ಕಾರಣಗಳೇನು ಮತ್ತು ಬಾಕಿ ಉಳಿದಿರುವ ಅನುದಾನದ ಬಿಡುಗಡೆಗೆ ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾದ ಎಫ್.ಡಿ.ಎ ಮತ್ತು ಎಸ್.ಡಿ.ಎ ಅಭ್ಯರ್ಥಿಗಳ ನೇಮಕಾತಿ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೩೮೪ (೪೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೭ ರಲ್ಲಿ ಅಧಿಸೂಚನೆ ಹೊರಡಿಸಿ ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾದ ಎಫ್.ಡಿ.ಎ ಮತ್ತು ಎಸ್.ಡಿ.ಎ ಅಭ್ಯರ್ಥಿಗಳೆಷ್ಟು; (ವಿವರ ನೀಡುವುದು)

(ಆ) ಯಾವಾಗ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ;

(ಇ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆಯೇ;

(ಈ) ತಡೆಹಿಡಿದಿದ್ದಲ್ಲಿ, ಯಾವಾಗ ತೆರವುಗೊಳಿಸಲಾಗುವುದು ?

## ಎನ್.ಪಿ.ಎಸ್ ಪಿಂಚಣಿಯ ಸಾಧಕ–ಭಾದಕಗಳ ಪರಿಶೀಲನೆಗೆ ರಚಿಸಿರುವ ಸಮಿತಿ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೮೫ (೪೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎನ್.ಪಿ.ಎಸ್ ಪಿಂಚಣಿ ವ್ಯವಸ್ಥೆಯ ಸಾಧಕ–ಭಾದಕಗಳ ಪರಿಶೀಲನೆಗೆ ಸಮಿತಿಯನ್ನು ಯಾವಾಗ ರಚಿಸಲಾಗಿದೆ;

(ಆ) ಈ ಸಮಿತಿಗೆ ನಿಗದಿ ಪಡಿಸಿದ ಕಾಲಮಿತಿ ಎಷ್ಟು; ಈ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ;

(ಇ) ಈ ಸಮಿತಿಯು ಸರ್ಕಾರಕ್ಕೆ ವರದಿಯನ್ನು ನೀಡಿದೆಯೇ;

(ಈ) ಶೀಘ್ರವಾಗಿ ವರದಿ ಸಲ್ಲಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

(ಉ) ಎನ್.ಪಿ.ಎಸ್ ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿ ಮಾಡುವ ಬಗ್ಗೆ ಸರ್ಕಾರದ ನಿಲುವೇನು ?

## ಕೋವಿಡ್ ಸಂಕಷ್ಟದಲ್ಲಿ ಖಾಸಗಿ ಆಸ್ಪತ್ರೆಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೬ (೪೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್–೧೯ ಸೋಂಕು ತೀವ್ರಗೊಂಡಿದ್ದ ಸಂದರ್ಭದಲ್ಲಿ ಇಲಾಖೆಯಿಂದ ಅಥವಾ ಬಿ.ಬಿ.ಎಂ.ಪಿ. ಯಿಂದ ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸ್ಸುಗೊಂಡಿದ್ದ ರೋಗಿಗಳ ಆರೈಕೆಗೆ ಸರ್ಕಾರ ಖಾಸಗಿ ಆಸ್ಪತ್ರೆಗಳಿಗೆ ನೀಡಿದ ಹಣವೆಷ್ಟು; ಆಸ್ಪತ್ರೆಗಳವಾರು ಹಣ, ರೋಗಿಗಳ ಸಂಖ್ಯೆ ನೀಡಲಾದ ವೈದ್ಯೋಪಚಾರದ ವಿವರಗಳೊಂದಿಗೆ ಸಂಪೂರ್ಣ ವಿವರ ನೀಡುವುದು;

(ಆ) ಕೋವಿಡ್-೧೯ ಸೋಂಕು ತೀವ್ರಗೊಂಡಿದ್ದ ಸಂದರ್ಭದಲ್ಲಿ ಇಲಾಖೆಯಿಂದ ಅಥವಾ ಬಿ.ಬಿ.ಎಂ.ಪಿ. ಯಿಂದ ಖಾಸಗಿ ಆಸ್ಪತ್ರೆಗೆ ಶಿಫಾರಸ್ಸು ಮಾಡಿದ ಸಂದರ್ಭದಲ್ಲಿ ಕಾನೂನು ಬಾಹಿರವಾಗಿ ಖಾಸಗಿ ಆಸ್ಪತ್ರೆಗಳು ರೋಗಿಗಳಿಂದ ಹಣ ಪಡೆದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಪ್ರಕರಣವಾರು ವಿವರ ನೀಡುವುದು)

(ಇ) ಈ ರೀತಿಯಲ್ಲಿ ಸರ್ಕಾರದಿಂದ ಹಣ ಪಡೆದ ಜೊತೆಗೆ ರೋಗಿಗಳಿಂದಲೂ ಹಣ ಪಡೆದ ಆಸ್ಪತ್ರೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು) ಇಲ್ಲವಾದಲ್ಲಿ, ಇವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಇರುವ ತೊಡಕುಗಳೇನು? (ಸಂಪೂರ್ಣ ವಿವರ ಒದಗಿಸುವುದು)

## ಕಂದಾಯ ಇಲಾಖೆಯ ಹುದ್ದೆಗಳಿಗೆ ಇತರೆ ಇಲಾಖೆಯ ಅಧಿಕಾರಿಗಳನ್ನು ನೇಮಿಸುತ್ತಿರುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೮೭ (೪೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸದೆ ಅನುಭವ ಮತ್ತು ತರಬೇತಿ ಇಲ್ಲದ ಸಚಿವಾಲಯದ ಬಡ್ತಿ ಪಡೆದ ನೌಕರರುಗಳನ್ನು ತಾಲ್ಲೂಕುಗಳ ತಹಶೀಲ್ದಾರ್ ಹುದ್ದೆಗೆ ನೇಮಕ ಮಾಡುತ್ತಿರುವುದು ಸರ್ಕಾರದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿರುದ್ಧವಲ್ಲವೇ; (ವಿವರ ನೀಡುವುದು)

(ಆ) ಈ ರೀತಿಯಲ್ಲಿ ಸಚಿವಾಲಯದ ಮತ್ತು ವಿಧಾನಸಭೆ/ವಿಧಾನ ಪರಿಷತ್‌ನಿಂದ ತಹಶೀಲ್ದಾರ್‌ರಾಗಿ ಹೋದ ಅಧಿಕಾರಿಗಳಿಂದ ಉಂಟಾಗಿರುವ ಲೋಪಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; (ವಿವರ ನೀಡುವುದು)

(ಇ) ಈ ರೀತಿಯಲ್ಲಿ ಸಚಿವಾಲಯದ/ಅಧಿಕಾರಿಗಳನ್ನು ನಿಯೋಜನೆ ಮೇರೆಗೆ ಬೇರೆ ಇಲಾಖೆ/ನಿಗಮ/ಮಂಡಳಿಗಳಿಗೆ ನಿಯೋಜಿಸಿದ್ದಲ್ಲಿ ಮಾತೃ ಇಲಾಖೆಯ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ಬಡ್ತಿಯಿಂದ ವಂಚಿತರಾಗುವುದಿಲ್ಲವೇ; ಇದಕ್ಕೆ ಸರ್ಕಾರದ ಸ್ಪಷ್ಟೀಕರಣವೇನು;

(ಈ) ಈ ರೀತಿ ಬೇರೆ ಇಲಾಖೆ ನಿಗಮ/ಮಂಡಳಿಗಳಿಗೆ ನಿಯೋಜನೆ ಮೇಲೆ ಕಳುಹಿಸದಿರಲು ಸರ್ಕಾರದ ಕ್ರಮಗಳೇನು? (ವಿವರ ನೀಡುವುದು)

## ತನಿಖಾಧಿಕಾರಿಗಳ ನ್ಯೂನತೆ ಮತ್ತು ಅಭಿಯೋಜಕರ ನಿರ್ಲಕ್ಷ್ಯತೆಯಿಂದ ಖುಲಾಸೆಯಾಗುತ್ತಿರುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೮ (೪೦೬) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಖುಲಾಸೆ ಸಮಿತಿಯು ತನಿಖಾಧಿಕಾರಿಗಳ ನ್ಯೂನತೆ ಮತ್ತು ಅಭಿಯೋಜಕರ ನಿರ್ಲಕ್ಷ್ಯತೆಯಿಂದ ಖುಲಾಸೆಗೊಂಡ ಪ್ರಕರಣಗಳ ಬಗ್ಗೆ ವರದಿ ನೀಡಿದೆಯೇ;

(ಆ) ಖುಲಾಸೆಗೊಂಡ ನಂತರ ಎಷ್ಟು ತಿಂಗಳಲ್ಲಿ ವರದಿ ನೀಡಬೇಕು; (ಕಾಲಮಿತಿಯ ವಿವರ ನೀಡುವುದು) ಖುಲಾಸೆ ಸಮಿತಿ ವರದಿ ನೀಡಿದ ನಂತರ ಎಷ್ಟು ಅವಧಿಯಲ್ಲಿ ಶಿಸ್ತು ಕ್ರಮಕ್ಕೆ ಆದೇಶಿಸಲಾಗುತ್ತದೆ; (ಕಾಲಮಿತಿಯ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಖುಲಾಸೆ ಸಮಿತಿಯ ವರದಿಯನ್ವಯ ತೆಗೆದುಕೊಂಡ ಶಿಸ್ತುಕ್ರಮಗಳೇನು? (ವಿವರಗಳನ್ನು ನೀಡುವುದು)

## ತನಿಖಾಧಿಕಾರಿಗಳಿಗೆ ವೆಚ್ಚವನ್ನು ನೀಡುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೮೯ (೪೦೭) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾಸಿಕವಾಗಿ ತನಿಖಾಧಿಕಾರಿಗಳಿಗೆ ನೀಡುವ ವೆಚ್ಚವೆಷ್ಟು; ಸಿ.ಪಿ.ಐ., ಡಿ.ಎಸ್.ಪಿ., ಠಾಣಾವಾರು, ವೃತ್ತವಾರು ಉಪವಿಭಾಗಗಳ ಪ್ರತ್ಯೇಕ ವಿವರ ನೀಡುವುದು;

(ಆ) ಕಳೆದ ಮೂರು ವರ್ಷಗಳಲ್ಲಿ ತನಿಖಾ ವೆಚ್ಚದ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ತನಿಖಾಧಿಕಾರಿಗಳಿಗೆ ನೀಡಲಾದ ತನಿಖಾವೆಚ್ಚ ಎಷ್ಟು; (ವಿವರ ನೀಡುವುದು) ಪಾವತಿ ಮಾಡಿರುವ ಹಾಗೂ ಪಾವತಿಗೆ ಬಾಕಿಯಿರುವ ವೆಚ್ಚವೆಷ್ಟು? (ವಿವರಗಳನ್ನು ನೀಡುವುದು)

## ಖುಲಾಸೆ ಪ್ರಕರಣಗಳಲ್ಲಿ ಆಗುತ್ತಿರುವ ನಿರ್ಲಕ್ಷ್ಯತೆ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೯೦ (೪೦೫) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫ ರಿಂದ ಇಲ್ಲಿಯವರೆಗೆ ಖುಲಾಸೆಯಾಗಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ನಗರಗಳವಾರು ವಿವರ ನೀಡುವುದು)

(ಆ) ಇವುಗಳಲ್ಲಿ, ತನಿಖಾಧಿಕಾರಿಗಳ ನ್ಯೂನತೆ ಮತ್ತು ಅಭಿಯೋಜಕರ ನಿರ್ಲಕ್ಷ್ಯತೆಯಿಂದ ಖುಲಾಸೆಯಾದ ಪ್ರಕರಣಗಳು ಇವೆಯೇ; (ಅವುಗಳ ವಿವರಗಳನ್ನು ನೀಡುವುದು)

(ಇ) ತನಿಖಾಧಿಕಾರಿಗಳ ನ್ಯೂನತೆ ಮತ್ತು ಅಭಿಯೋಜಕರ ನಿರ್ಲಕ್ಷ್ಯತೆಯಿಂದ ಖುಲಾಸೆಯಾಗಿದ್ದಲ್ಲಿ ಅಂತಹ ತನಿಖಾಧಿಕಾರಿ ಮತ್ತು ಅಭಿಯೋಜಕರುಗಳ ಮೇಲೆ ತೆಗೆದುಕೊಂಡ ಶಿಸ್ತಿನ ಕ್ರಮಗಳೇನು? (ವಿವರಗಳನ್ನು ಒದಗಿಸುವುದು)

## ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೧ (೩೯೮) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೦೩ ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳೆಷ್ಟು; ಇವುಗಳಲ್ಲಿ ಎಷ್ಟು ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ನಿಗಧಿತ ಅವಧಿಯೊಳಗಾಗಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು; ಎಷ್ಟು ಕಾಮಗಾರಿಗಳು ಪೂರ್ಣಗೊಳಿಸಿರುವುದಿಲ್ಲ; ( ವಿವರ ನೀಡುವುದು)

(ಇ) ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಒಂದು ವರ್ಷವಾದರೂ ಪ್ರಾರಂಭವಾಗದ ಕಾಮಗಾರಿಗಳೆಷ್ಟು;

(ಈ) ನಿಗಧಿತ ಅವಧಿಯೊಳಗಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸದಿರುವುದಕ್ಕೆ ಕಾರಣಗಳೇನು; ಮತ್ತು ವಿಳಂಬ ತಪ್ಪಿಸಲು ಕೈಗೊಂಡ ಕ್ರಮಗಳೇನು?

## ಲಾಕ್‌ಡೌನ್‌ನಿಂದ ರಾಜ್ಯದಲ್ಲಿ ಜಿಎಸ್‌ಟಿ ನಿವ್ವಳ ಸಂಗ್ರಹಣೆಯಲ್ಲಿ ಖೋತಾ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೩೯೨ (೪೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲಾಕ್‌ಡೌನ್‌ನಿಂದ ರಾಜ್ಯದಲ್ಲಿ ಜಿಎಸ್‌ಟಿ ನಿವ್ವಳ ಸಂಗ್ರಹಣೆಯಲ್ಲಿ ಖೋತಾ ಆಗಿರುವುದು ನಿಜವೇ; (ಪೂರ್ಣ ಮಾಹಿತಿ ನೀಡುವುದು)

(ಆ) ಈ ತೆರಿಗೆ ಸಂಗ್ರಹಣೆ ಖೋತಾವನ್ನು ನೀಗಿಸಲು ಕೇಂದ್ರ ಸರ್ಕಾರ ಸೂಚಿಸಿರುವ ಮಾರ್ಗೋಪಾಯಗಳೇನು; (ವಿವರಗಳನ್ನು ಒದಗಿಸುವುದು)

(ಇ) ಕೇಂದ್ರ ಸರ್ಕಾರದ ಮಾರ್ಗೋಪಾಯಗಳಲ್ಲಿ ರಾಜ್ಯ ಸರ್ಕಾರ ಅನುಸರಿಸಿರುವ ಅಥವಾ ಆಯ್ದುಕೊಂಡಿರುವ ಮಾರ್ಗೋಪಾಯಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು)

(ಈ) ಈ ಮಾರ್ಗೋಪಾಯದ ರೀತ್ಯಾ ರಾಜ್ಯ ಸರ್ಕಾರ ವಾಣಿಜ್ಯ ಬ್ಯಾಂಕ್‌ಗಳಿಂದ/ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಪಡೆಯುತ್ತಿರುವ ಸಾಲವೆಷ್ಟು ; ಈ ಸಾಲಗಳ ಮಂಜೂರಾತಿಯಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ನಿರ್ವಹಿಸ ಬೇಕಾಗಿರುವ ನಿಬಂಧನೆಗಳೇನು; (ವಿವರ ನೀಡುವುದು)

(ಉ) ವಾಣಿಜ್ಯ ಬ್ಯಾಂಕ್/ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಪಡೆಯುವ ಸಾಲಗಳಲ್ಲಿ ಇಲಾಖಾವಾರು ಹಂಚಿಕೆಯ ವಿವರ ನೀಡುವುದು; ಈ ಹಂಚಿಕೆಯಲ್ಲಿ ಕೇವಲ ನೀರಾವರಿ ಇಲಾಖೆಗೆ ಅತಿ ಹೆಚ್ಚು ಹಂಚಿಕೆಯಾಗಲು ಕಾರಣವೇನು; ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಇತರೆ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ, ಲೋಕೋಪಯೋಗಿ ಮತ್ತು ಸಣ್ಣ ನೀರಾವರಿ ಇಲಾಖೆಗಳನ್ನು ಕಡೆಗಣಿಸಲು ಕಾರಣವೇನು? (ಸಂಪೂರ್ಣ ಮಾಹಿತಿ ನೀಡುವುದು)

## ನೀರಾವರಿ ಯೋಜನೆಗಳಿಗೆ ಒದಗಿಸಿದ ಅನುದಾನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೩೯೩ (೪೦೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ನೀರಾವರಿ ಯೋಜನೆಗಳಿಗೆ ಬಜೆಟ್‌ನಲ್ಲಿ ನಿಗದಿಪಡಿಸಿದ, ಬಿಡುಗಡೆ ಮಾಡಿದ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು; (ಯೋಜನೆವಾರು ಮತ್ತು ವರ್ಷವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಮಂಜೂರು ಮಾಡಿದ ಹೊಸ ನೀರಾವರಿ ಯೋಜನೆಗಳು ಯಾವುವು; ಈ ಹೊಸ ಯೋಜನೆಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಹಣ ಎಷ್ಟು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಹೊಸದಾಗಿ ಘೋಷಣೆ ಮಾಡಿರುವ ನೀರಾವರಿ ಯೋಜನೆಗಳು ಯಾವುವು; ಈ ಹೊಸ ಯೋಜನೆಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಹಣ ಎಷ್ಟು; (ವಿವರ ನೀಡುವುದು)

(ಈ) ಸದರಿ ಯೋಜನೆಗಳು ಪೂರ್ಣಗೊಳ್ಳಲು ಎಷ್ಟು ಸಮಯವನ್ನು ನಿಗದಿ ಮಾಡಲಾಗಿದೆ ಹಾಗೂ ಈ ಯೋಜನೆಗಳು ಪೂರ್ಣಗೊಳ್ಳಲು ಅಗತ್ಯವಿರುವ ಹಣ ಎಷ್ಟು; (ವಿವರಗಳನ್ನು ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರದ ಖಾತರಿಯೊಂದಿಗೆ ವಿವಿಧ ವಾಣಿಜ್ಯ ಬ್ಯಾಂಕ್‌ಗಳಿಂದ ಎತ್ತಿರುವ ಸಾಲವೆಷ್ಟು ಮತ್ತು ಈ ಸಾಲದಲ್ಲಿ ಹೆಚ್ಚುವರಿ ಆರ್ಥಿಕ ಹೊರೆ (Extra Financial Implication) ಯ ಬಿಲ್ಲುಗಳನ್ನು ತೀರುವಳಿ ಮಾಡಲು ಉಪಯೋಗಿಸಿರುವ ಹಣವೆಷ್ಟು? (ನಿಗಮವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ವಿದ್ಯುತ್ ಪ್ರಸರಣ ಮತ್ತು ಹಂಚಿಕೆ ವ್ಯವಸ್ಥೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೩೯೪ (೪೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಆರ್ಥಿಕ ಅನುದಾನದ ಯೋಜನೆಗಳ ಅಡಿ ರಾಜ್ಯ ಸರ್ಕಾರ ರಾಜ್ಯದಲ್ಲಿ ವಿದ್ಯುತ್ ಪ್ರಸರಣ ಮತ್ತು ಹಂಚಿಕೆ (Transmission & Distribution) ವ್ಯವಸ್ಥೆಯನ್ನು ಬಲಗೊಳಿಸಲು ಕೈಗೊಂಡಿರುವ ಯೋಜನೆಗಳು ಮತ್ತು ಗುರಿಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳ ಅಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆ ಆಗಿರುವ ಅನುದಾನವೆಷ್ಟು; ನಿಗದಿಪಡಿಸಿದ ಯೋಜನೆ ಮತ್ತು ಗುರಿಯಂತೆ ಪ್ರಸರಣ ಮತ್ತು ಹಂಚಿಕೆಯಲ್ಲಿ ಲುಕ್ಸಾನ ತಗ್ಗಿಸಲು ಸಾಧಿಸಲಾಗಿರುವ ಪ್ರಗತಿಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಒಂದು ವೇಳೆ ನಿಗದಿಪಡಿಸಿದ ಯೋಜನೆ ಮತ್ತು ಗುರಿಯನ್ನು ಸಾಧಿಸಲು ವಿಫಲವಾಗಿದ್ದು ಅದಕ್ಕೆ ಕಾರಣಗಳೇನು; ಈ ವೈಫಲ್ಯದಲ್ಲಿ ಭಾಗಿಯಾಗಿರುವ ಸಂಸ್ಥೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಈ) Ujwal Discom Assurance Yojana (UDAY) ಅಡಿಯಲ್ಲಿ ನೀಡಲಾಗಿರುವ ಆರ್ಥಿಕ ನೆರವು ಸರಿಯಾಗಿ ಬಳಕೆಯಾಗಿದೆಯೇ; ಇಲ್ಲದಿದ್ದಲ್ಲಿ, ಇತ್ತೀಚಿನ ಕೇಂದ್ರ ಸರ್ಕಾರ Electricity Act ನ್ನು ಜಾರಿಗೆ ತರಲು ಉದ್ದೇಶಿಸಿರುವ ತಿದ್ದುಪಡಿಗಳಿಂದ ಖಾಸಗಿ Power Generator ಗಳಿಗೆ ನೇರವಾಗಿ ಬಾಕಿ ಹಣ ಪಾವತಿ ಮಾಡುವುದರಿಂದ, DISCOM ಗಳು ಇನ್ನಷ್ಟು ಆರ್ಥಿಕವಾಗಿ ಬಲಹೀನವಾಗುವುದಲ್ಲದೆ, ರಾಜ್ಯ ಸರ್ಕಾರಗಳ ಸಾಮಾಜಿಕ ಯೋಜನೆಗಳನ್ನು ಅನುಷ್ಠಾನಗೊಳಿಸಲು ವಿಫಲವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಸರ್ಕಾರ ಯೋಜನೆಗಳ ಅನುಷ್ಠಾನದಲ್ಲಿ ಯಶಸ್ಸು ಹೊಂದಲು ಯಾವ ಕ್ರಮಗಳನ್ನು ಕೈಗೊಳ್ಳಲಿದೆ?

## ಮಾದಕದ್ರವ್ಯ ಬಳಕೆ ಮತ್ತು ಸೇವನೆ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪುರ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೫ (೪೨೮) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಾದಕದ್ರವ್ಯ ಬಳಕೆ ಮತ್ತು ಸೇವನೆಯ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಡ್ರಗ್ಸ್ ನಿಯಂತ್ರಣ ಕಾಯಿದೆಯಡಿ ಈವರೆಗೆ ಕ್ರಮ ಕೈಗೊಳ್ಳಲಾದ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ಡ್ರಗ್ಸ್ ಮಾರಾಟ ಮತ್ತು ನಿಯಂತ್ರಣಕ್ಕೆ ಕಡಿವಾಣ ತರಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗುವುದೇ?

## ಕೊಡಗು ಜಿಲ್ಲೆಯ ಕಾಫಿ ಬೆಳೆಗಾರರಿಗೆ ೧೦ ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಸುವ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೯೬ (೪೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಉದ್ದೇಶಕ್ಕೆ ಬಳಕೆಯಾಗುವ ರೈತರ ಎಷ್ಟು ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ;

(ಆ) ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ಕಾಫಿ ಕೃಷಿ ಉದ್ದೇಶಕ್ಕೆ ಬಳಸುವ ೧೦ ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆಯೇ;

(ಇ) ಇಲ್ಲದಿದ್ದಲ್ಲಿ, ಕಳೆದ ಹಲವಾರು ವರ್ಷಗಳಿಂದ ಸತತವಾಗಿ ಕಾಫಿ ಬೆಳೆ ಹಾಳಾದ ಕಾರಣದಿಂದಾಗಿ ಕೊಡಗಿನ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದನ್ನು ಪರಿಗಣಿಸಿ, ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ಬಳಸುವ ೧೦ ಅಶ್ವಶಕ್ತಿವರೆಗಿನ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ಕ್ರಮ ವಹಿಸುವುದೇ ?

## ಕೊಡಗು ಜಿಲ್ಲೆಯಲ್ಲಿ ಕಾವೇರಿ ನದಿ ಗಡಿ ಗುರುತು ಸರ್ವೆ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೭ (೪೫೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಾವೇರಿ ನದಿ ಗಡಿ ಗುರುತು ಸರ್ವೆ ಕಾರ್ಯ ನಡೆಯದೆ ಇರುವುದರಿಂದ ನದಿಯ ಸಂರಕ್ಷಣೆ ನದಿ ತಟಗಳ ಅಭಿವೃದ್ಧಿ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಯಾವ ಕಾಲಮಿತಿಯೊಳಗೆ ಕಾವೇರಿ ನದಿ ಗಡಿ ಗುರುತು ಸರ್ವೆ ಕಾರ್ಯ ಮಾಡುವುದು ಮತ್ತು ಆ ಮೂಲಕ ನದಿಯ ಸಂರಕ್ಷಣೆ ನದಿ ತಟಗಳ ಅಭಿವೃದ್ಧಿ ಹಾಗೂ ನದಿಯ ತಟದಲ್ಲಿರುವ ಜನರಿಗೆ ಪುನರ್ವಸತಿ ಕಲ್ಪಿಸಲು ಕ್ರಮ ವಹಿಸುವುದು ?

## ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಹಾಗೂ ಜನರಲ್ ತಿಮ್ಮಯ್ಯನವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡುವ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೮ (೪೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇಶದ ಹೆಮ್ಮೆಯ ವೀರ ಸೇನಾನಿಗಳಾದ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಹಾಗೂ ಜನರಲ್ ತಿಮ್ಮಯ್ಯನವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆಯೇ;

(ಆ) ಸಲ್ಲಿಸದಿದ್ದಲ್ಲಿ, ದೇಶದ ಹೆಮ್ಮೆಯ ಈ ಇಬ್ಬರು ವೀರ ಸೇನಾನಿಗಳು ದೇಶಕ್ಕೆ ಸಲ್ಲಿಸಿರುವ ಅಪ್ರತಿಮ ಸೇವೆಗೆ ಗೌರವ ಸಲ್ಲಿಸುವ ದೃಷ್ಟಿಯಿಂದ, ಸದರಿಯವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಲು ಸರ್ಕಾರ ಕ್ರಮ ವಹಿಸುವುದೇ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೩೯೯ (೪೫೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಎಲ್ಲಾ ಕಂತುಗಳ ಅನುದಾನ ಬಿಡುಗಡೆಯಾಗಿದೆಯೇ;

(ಆ) ಬಂದಿದ್ದಲ್ಲಿ, ೨೦೧೮-೧೯, ೨೦೧೯-೨೦ನೇ ಸಾಲಿನಲ್ಲಿ ಪ್ರತಿಯೊಬ್ಬ ಮಾನ್ಯ ಶಾಸಕರಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; (ವಿವರಗಳನ್ನು ವರ್ಷವಾರು ನೀಡುವುದು)

(ಇ) ಸದರಿ ಸಾಲಿನಲ್ಲಿ ೨ ಕೋಟಿ ಮೊತ್ತದ ಕಾಮಗಾರಿಗಳ ಪಟ್ಟಿಯನ್ನು ನೀಡಿರುವ ಎಲ್ಲಾ ಮಾನ್ಯ ಶಾಸಕರುಗಳು ಸೂಚಿಸಿರುವ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು ಹಾಗೂ ಈ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

(ಈ) ೨೦೧೯-೨೦ ನೇ ಸಾಲಿಗೆ ಸಂಬಂಧಿಸಿದಂತೆ ಬಾಕಿ ಇರುವ ಅನುದಾನವನ್ನು ಬಿಡುಗಡೆಗೊಳಿಸಲಾಗುವುದೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಿಡುಗಡೆಗೊಳಿಸಲಾಗುವುದು ?

## ಬೆಂಗಳೂರು ನಗರದಲ್ಲಿರುವ ರಾಸಾಯನಿಕ ಕಾರ್ಖಾನೆಗಳ ಗೋದಾಮುಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-**

೪೦೦ (೪೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿರುವ ರಾಸಾಯನಿಕ ಕಾರ್ಖಾನೆಗಳ ಗೋದಾಮುಗಳ ಸಂಖ್ಯೆ ಎಷ್ಟು; ಈ ಪೈಕಿ ಅಕ್ರಮ ಗೋದಾಮುಗಳೆಷ್ಟು;

(ಆ) ಇತ್ತೀಚೆಗೆ ಮೈಸೂರು ರಸ್ತೆಯಲ್ಲಿನ ರಾಸಾಯನಿಕ ಕಾರ್ಖಾನೆಯಲ್ಲಿನ ಅಗ್ನಿಸ್ಫೋಟದಿಂದ ಉಂಟಾದ ಹಾನಿಯ ಪ್ರಮಾಣ ಎಷ್ಟು;

(ಇ) ಈ ಸಂಬಂಧ ತನಿಖೆ ಯಾವ ಹಂತದಲ್ಲಿದೆ; ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು?

## ನಿರ್ಭಯ ಯೋಜನೆಯ ಜಾರಿ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-**

೪೦೧ (೪೬೯) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದ ನಿರ್ಭಯ ಯೋಜನೆಯಡಿಯಲ್ಲಿ ರಾಜ್ಯಕ್ಕೆ ಮಂಜೂರಾಗಿರುವ ಅನುದಾನ ಎಷ್ಟು; ಹಾಗೂ ಬಿಡುಗಡೆಯಾಗಿರುವ ಅನುದಾನ ಎಷ್ಟು; (ವಿವರಗಳನ್ನು ನೀಡುವುದು)

(ಆ) ಸದರಿ ಅನುದಾನದ "ಸೇಫ್ ಸಿಟಿ ಪ್ರಾಜೆಕ್ಟ್"ಗೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) "ಸೇಫ್ ಸಿಟಿ ಪ್ರಾಜೆಕ್ಟ್" ಇ-ಟೆಂಡರ್ ಕರೆಯಲಾಗಿದೆಯೇ; ಹಾಗಿದ್ದಲ್ಲಿ, ಟೆಂಡರ್‌ನಲ್ಲಿ ಭಾಗವಹಿಸಲು ಯಾವ ಯಾವ ನಿರ್ಬಂಧನೆಗಳನ್ನು ವಿಧಿಸಲಾಗಿತ್ತು; ಟೆಂಡರ್‌ನಲ್ಲಿ ಭಾಗವಹಿಸಿರುವ ಕಂಪನಿಗಳು ಯಾವುವು; ಅವುಗಳಲ್ಲಿ ಅರ್ಹವಾದ ಕಂಪನಿಗಳು ಯಾವುವು; ಯಾವ ಕಂಪನಿಗೆ ಟೆಂಡರ್ ಮಂಜೂರಾಗಿದೆ; (ದಾಖಲೆಯನ್ನು ನೀಡುವುದು) ಅಥವಾ ಟೆಂಡರ್ ರದ್ದುಗೊಳಿಸಿದ್ದರೆ ಅದಕ್ಕೆ ಕಾರಣಗಳೇನು;

(ಈ) ಟೆಂಡರ್ ಮಂಜೂರಾತಿಯ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪೊಲೀಸ್ ಅಧಿಕಾರಿಗಳು ಟೀಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಬಿ.ಡಿ.ಎ ನಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೪೦೨ (೪೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು;

(ಆ) ಯಾವ ಯಾವ ಇಲಾಖೆಗಳಿಂದ ಇವರುಗಳೂ ನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿದ್ದಾರೆ; ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ;

(ಇ) ಈ ರೀತಿ ನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿರುವ ಅಧಿಕಾರಿ/ನೌಕರರು ಅವ್ಯವಹಾರಗಳಲ್ಲಿ ತೊಡಗಿರುವ ಬಗ್ಗೆ ದೂರುಗಳು ಬಂದಿವೆಯೇ;

(ಈ) ಬಂದಿದ್ದಲ್ಲಿ, ಇವರುಗಳ ಮೇಲೆ ಕೈಗೊಂಡ ಕ್ರಮಗಳೇನು; ಹಾಗೂ ನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿರುವವರನ್ನು ಮಾತೃ ಇಲಾಖೆಗೆ ಕಳುಹಿಸಲು ಕೈಗೊಂಡ ಕ್ರಮಗಳೇನು ?

## ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಕೆರೆಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೪೦೩ (೪೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಗುರುತಿಸಲಾದ ಒಟ್ಟು ಎಷ್ಟು ಕೆರೆಗಳು ಅಸ್ತಿತ್ವದಲ್ಲಿವೆ; ಅವುಗಳ ವಿಸ್ತೀರ್ಣ ಮತ್ತು ಕೆರೆಗಳ ಸಂಪೂರ್ಣ ಮಾಹಿತಿ ಒದಗಿಸುವುದು;

(ಆ) ಈ ಪೈಕಿ ಎಷ್ಟು ಕೆರೆಗಳು ಒತ್ತುವರಿಯಾಗಿವೆ; ಮತ್ತು ಎಷ್ಟು ಕೆರೆಗಳು ಒತ್ತುವರಿಯನ್ನು ತೆರವುಗೊಳಿಸಲಾಗಿದೆ;

(ಇ) ಇದಕ್ಕಾಗಿ ಕೈಗೊಂಡಿರುವ ಕಾನೂನಾತ್ಮಕ ಕ್ರಮಗಳು ಹಾಗೂ ಕಾಲಮಿತಿಯೇನು ? (ವಿವರಗಳನ್ನು ಒದಗಿಸುವುದು)

## ಬಿ.ಡಿ.ಎ ನಲ್ಲಿ ಆಸ್ತಿ ದಾಖಲೆಗಳ ಡಿಜಿಟಲೀಕರಣ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೪೦೪ (೪೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅಮೂಲ್ಯವಾದ ಆಸ್ತಿ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲು ಮತ್ತು ತನ್ನ ಆಡಳಿತವನ್ನು ಗಣಕೀಕರಿಸಲು ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ಒದಗಿಸುವುದು)

## ಖಾಲಿಯಿರುವ ಕೆ.ಎ.ಎಸ್-ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೪೦೫ (೪೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಲಿಯಿರುವ ಎಸಿ, ಡಿವೈಎಸ್‌ಪಿ, ತಹಶೀಲ್ದಾರ್ ಸೇರಿದಂತೆ ಖಾಲಿಯಿರುವ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳು ಎಷ್ಟು;

(ಆ) ಈ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; (ಪ್ರಸ್ತಾವನೆಯು ಯಾವ ಹಂತದಲ್ಲಿದೆ)

(ಇ) ಈ ಹುದ್ದೆಗಳಿಗಾಗಿ ನೇಮಕಾತಿ ಅಧಿಸೂಚನೆಯನ್ನು ಹೊರಡಿಸುವುದು ಯಾವಾಗ ?

## ಕೆ.ಕೆ.ಆರ್.ಡಿ.ಬಿ ಯ ೨೦೧೮-೧೯ ನೇ ಸಾಲಿನ ೨ ಕೋಟಿ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೬ (೪೨೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಡಿಯಲ್ಲಿ ೨೦೧೮-೧೯ ನೇ ಸಾಲಿನಲ್ಲಿ ವಿಧಾನ ಪರಿಷತ್ ಸದಸ್ಯರಿಗೆ ರೂ.೨.೦೦ ಕೋಟಿಗಳನ್ನು ಗ್ರಾಮೀಣ ಕುಡಿಯುವ ನೀರು ಇಲಾಖೆಗೆ ನೀಡಲಾಗಿದ್ದ ಟೆಂಡರ್ ಪ್ರಕ್ರಿಯೆ ಕೂಡ ಪೂರ್ಣಗೊಂಡಿದ್ದರೂ ಇಲ್ಲಿಯವರೆವಿಗೂ ಪ್ರಾರಂಭಿಸದೆ ಇರುವುದಕ್ಕೆ ಕಾರಣವೇನು? (ವಿವರ ನೀಡುವುದು)

## ರಾಜ್ಯ ಸರ್ಕಾರಿ ಹುದ್ದೆಗಳಲ್ಲಿ ವಿಕಲಚೇತನರ ಮುಂಬಡ್ತಿಯಲ್ಲಿ ಮೀಸಲಾತಿ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೭ (೪೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ವಿಕಲಚೇತನರ ಸರ್ಕಾರಿ ನೌಕರರುಗಳಿಗೆ ಮುಂಬಡ್ತಿಯಲ್ಲಿ ಶೇಕಡಾ ಮೂರರಷ್ಟು (ಶೇ.೩) ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಪ್ರಸ್ತಾವನೆಯ ಬಗ್ಗೆ ಆದೇಶ ಹೊರಡಿಸಿ ಜಾರಿಗೆ ತರಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಅನ್ಯ ರಾಜ್ಯಗಳಲ್ಲಿ ವಿಕಲಚೇತನರಿಗೆ ಮುಂಬಡ್ತಿಯಲ್ಲಿ ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿದೆಯೇ; ರಾಜ್ಯದಲ್ಲಿರುವ ಈ ನೀತಿಯನ್ನು ಜಾರಿಗೆ ತರಲು ಕ್ರಮ ವಹಿಸಲಾಗುವುದೇ ?

## ಕಬಿನಿ ಜಲಾಶಯದ ಕೆಳಗೆ ಉದ್ಯಾನವನ ನಿರ್ಮಾಣ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೮ (೪೨೨) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಬಿನಿ ಜಲಾಶಯದ ಹಿಂಭಾಗದಲ್ಲಿ ಪಾಳು ಬಿದ್ದಿರುವ ೭೫ ಎಕರೆ ಪ್ರದೇಶದಲ್ಲಿ ಉದ್ಯಾನವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಈ ಉದ್ಯಾನವನ ನಿರ್ಮಾಣಕ್ಕೆ ೧೦೦ ಕೋಟಿ ರೂ. ಒದಗಿಸುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಯವರು ಭರವಸೆ ನೀಡಿದ್ದಾರೆಯೇ;

(ಆ) ಕಬಿನಿ ಜಲಾಶಯದ ಹಿಂಭಾಗದ ಈ ಪ್ರದೇಶದಲ್ಲಿ ಭವ್ಯವಾದ ಆಕರ್ಷಕ ಉದ್ಯಾನವನ ನಿರ್ಮಿಸಿ ಪ್ರವಾಸಿ ಧಾಮವನ್ನಾಗಿ ರೂಪಿಸಲು ಕ್ರಮ ಜರುಗಿಸಲಾಗುವುದೇ ?

## ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನದ ಕುರಿತು.

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೯ (೫೯೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಅನುದಾನದ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಅನುದಾನ ಬಿಡುಗಡೆ ಮಾಡಲು ಕೈಗೊಂಡ ಕ್ರಮಗಳೇನು ;

(ಆ) ಕಳೆದ ಮೂರು (೩) ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ವರ್ಷವಾರು ಮತ್ತು ಶಾಸಕರುಗಳ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ (೩) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ–ಬಾಗಲಕೋಟೆ ಕ್ಷೇತ್ರಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು ; (ಮಾಹಿತಿಯನ್ನು ವರ್ಷವಾರು ಮತ್ತು ಶಾಸಕರ ಕ್ಷೇತ್ರವಾರು ನೀಡುವುದು)

(ಈ) ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ವಿಜಯಪುರ–ಬಾಗಲಕೋಟೆ ಜಿಲ್ಲೆಗಳಲ್ಲಿಯ ಮಾನ್ಯ ಶಾಸಕರುಗಳ ಕ್ಷೇತ್ರಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ? (ಮಾನ್ಯ ಶಾಸಕರ ಹೆಸರು ಸಹಿತ ಕೈಗೊಂಡ ಕಾಮಗಾರಿಗಳ ವಿವರಗಳನ್ನು ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–134/400 ಪ್ರತಿಗಳು/29–01–2021